# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com

Volume: 01 | Issue : 24 | TUESDAY 31-03-2026 | PRGI No : KNKAN/26/A0962 | Pages:4 | Rs.2.00 | M: 9742418836


## ಡ್ರಗ್ಸ್ ಮುಕ್ತ ರಾಜ್ಯ ಸಂಕಲ್ಪ: ಸಿಎಂ ಸಿದ್ಧರಾಮಯ್ಯ



ಬೆಂಗಳೂರು: ರಾಜ್ಯವನ್ನು ಮಾದಕ ವಸ್ತು ಮುಕ್ತ ಮಾಡುವುದು ರಾಜ್ಯ ಸರ್ಕಾರದ ಸಂಕಲ್ಪವಾಗಿದೆ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು.

ಮೈಸೂರಿನ ಕರ್ನಾಟಕ ಪೊಲೀಸ್ ಅಕಾಡೆಮಿಯಲ್ಲಿಂದು ಮೈಸೂರು ಘಟಕದ 46ನೇ ತಂಡದ ಸಿವಿಲ್ ಪೊಲೀಸ್ ಉಪನಿರೀಕ್ಷಕ ಪ್ರಶಿಕ್ಷಣಾರ್ಥಿಗಳ ನಿರ್ಗಮನ ಪಥ ಸಂಚಲನದಲ್ಲಿ ಪಾಲ್ಗೊಂಡು ತರಬೇತಿ ಪೂರ್ಣಗೊಳಿಸಿದ ಎಲ್ಲ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್‌ಗಳಿಗೆ ಶುಭ ಹಾರೈಸಿ ಮಾತನಾಡಿದ ಅವರು, ಮಾದಕ ವಸ್ತು ಮುಕ್ತ ಸಮಾಜ ನಿರ್ಮಾಣ ಮಾಡುವುದಾಗಿ ಸರ್ಕಾರ ಘೋಷಣೆ ಮಾಡಿದೆ. ಈ ನಿಟ್ಟಿನಲ್ಲಿ ಪೊಲೀಸರು ತಮ್ಮ ಠಾಣಾ ವ್ಯಾಪ್ತಿಯಲ್ಲಿ ಮಾದಕ ವಸ್ತು ತಯಾರಕರು ,ಮಾರಾಟ ಮಾಡುವವರ ಮೇಲೆ ಕ್ರಮ ಕೈಗೊಳ್ಳಬೇಕು ಎಂದರು. ಮಾದಕ ವಸ್ತುಗ ಳು ಯುವ ಜನಾಂಗದ ಮೇಲೆ ಮಾರಕ ಪರಿಣಾಮ ಬೀರುತ್ತವೆ. ಇದನ್ನು ನಿಮೂ ರ್ಲನೆ ಮಾಡದೆ ಹೋದರೆ ಸಮಾಜದ ಸ್ವಾಸ್ಥ್ಯ ಕಾಪಾಡಲು ಸಾಧ್ಯವಿಲ್ಲ. ಆದ್ದರಿಂದ ಈ ದಿಕ್ಕಿನಲ್ಲಿ ಪ್ರಾಮಾಣಿಕ ಪ್ರಯತ್ನ ಅಗತ್ಯ ಎಂದರು. ಮಾದಕ ವಸ್ತುಗಳ ಸರಬರಾಜು, ತಯಾರಿಕೆಯನ್ನು ನಿಲ್ಲಿಸಿ, ರಾಜ್ಯವನ್ನು ಮಾದಕ ವಸ್ತು ಮುಕ್ತ ರಾಜ್ಯವನ್ನಾಗಿಸುವುದು ರಾಜ್ಯ ಸರ್ಕಾರದ ಸಂಕಲ್ಪವಾಗಿದೆ. ಈ ದಿಕ್ಕಿನಲ್ಲಿ ಸರ್ಕಾರ ಕಾರ್ಯತತ್ಪರವಾಗಿದೆ. ಪೊಲೀಸರಿಗೂ ಈ ನಿಟ್ಟಿನಲ್ಲಿ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದ್ದೇವೆ ಎಂದು ಹೇಳಿದರು. **ಜನಸ್ನೇಹಿ ಮತ್ತು ಮಾನವೀಯುತೆಯಿಂದ ಗುರುತಿಸಿ:** ಪೊಲೀಸರು ಸದಾ ಜನಸ್ನೇಹಿ ಯಾಗಿರಬೇಕು ಮಾನವೀಯು ತೆಯಿಂದ ಕೆಲಸ ಮಾಡಬೇಕು. ಸಾರ್ವಜನಿಕರ ಜತೆ ಸ್ನೇಹದಿಂದ ಇರಬೇಕು. ಅಪರಾಧಿಗಳಿಗೆ ಕರುಣೆ ತೋರಬೇಕಿಲ್ಲ. ನಿರಪರಾಧಿಗಳಿಗೆ ಕರುಣೆ ತೋರಬೇಕು ಎಂದರು.

ನ್ಯಾಯ ವಿತರಣೆಯಲ್ಲಿ ಪೊಲೀಸರು ಯಾವುದೇ ಕಾರಣಕ್ಕೂ ರಾಜಿಯಾಗಬಾರದು ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು. ಎಲ್ಲರಿಗೂ ರಕ್ಷಣೆ, ಸಮಾನ ಅವಕಾಶಗ'ಳು ದೊರೆಯಬೇಕು. ಪೊಲೀಸ್ ಸೇವೆ ಯಲ್ಲಿ ಶಿಸ್ತು, ಸಂಯಮ, ಪ್ರಾಮಾಣಿಕತೆ, ಮಾನವೀಯತೆ ಬಹಳ ಮುಖ್ಯ ಎಂದರು. ಸಮಾಜದಲ್ಲಿ ಜಾತಿ ವ್ಯವಸ್ಥೆ ಇದೆ. ದೀನ ದಲಿತರ, ಅಶಕ್ತರ, ಮಹಿಳೆಯರ ರಕ್ಷಣೆ ಪೊಲೀಸರ ಜವಾಬ್ದಾರಿ ಎಂದು ಮುಖ್ಯಮಂತ್ರಿಗಳು ಹೇಳಿದರು. ಮಧ್ಯರಾತ್ರಿಯಲ್ಲಿ ಮಹಿಳೆಯರು ನಿರ್ಭಯವಾಗಿ ಓಡಾಡುವಂತಾದಾಗ ಮಾತ್ರ ನಿಜ ಅರ್ಥದಲ್ಲಿ ಸ್ವಾತಂತ್ರ್ಯ ದೊರೆತಂತೆ ಎಂದು ಮಹಾತ್ಮಗಾಂಧಿ ಅವರು ಹೇಳಿದ್ದರು. ಸಮಾಜದ ಪ್ರತಿಯೊಬ್ಬರಿಗೂ ಆರ್ಥಿಕ, ಸಾಮಾಜಿಕ ಸಮಾನತೆ ದೊರೆಯಬೇಕು. ಆದ್ದರಿಂದ ಪೊಲೀಸರು ನ್ಯಾಯವನ್ನು ಎತ್ತಿಹಿಡಿಯುವ ಕೆಲಸದಲ್ಲಿ ಯಾವುದೇ ಕಾರಣಕ್ಕೂ ರಾಜಿಯಾಗಬಾ ರದು ಎಂದರು. ಪೊಲೀಸರು ಸರ್ಕಾರದ ಪ್ರತಿನಿದಿಗಳಾಗಿ ಕರ್ತವ್ಯ ನಿರ್ವಹಿಸಬೇಕು. ಕಾನೂನು ಸುವ್ಯವಸ್ಥೆಯನ್ನು ಕಾಪಾಡುವಲ್ಲಿ ಮಹತ್ವದ ಪಾತ್ರ ವಹಿಸಬೇಕು ಎಂದು ಹೇಳಿದರು. ಸಮಾಜದ ದುರ್ಬಲ ವರ್ಗ ದವರನ್ನು ಮುಖ್ಯವಾಹಿನಿಗೆ ತರಬೇಕಾಗಿದೆ. ಆ ನಿಟ್ಟಿನಲ್ಲಿ ಪೊಲೀಸರು ಎಲ್ಲರಿಗೂ ರಕ್ಷಣೆ ಸಮಾನ ಅವಕಾಶಗಳು ಸಿಗುವಂತ ಕೆಲಸ ಮಾಡಬೇಕು ಎಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಸೈಬರ್ ಅಪರಾಧಗಳು ಹೆಚ್ಚಾಗುತ್ತಿವೆ. ಸೈಬರ್ ಅಪರಾಧಗಳನ್ನಾ ನಿಗ್ರಹಿಸಲು ಸೂಕ್ತ ತರಬೇತಿ ನೀಡಲಾಗುತ್ತಿದ್ದು, ಅವುಗಳನ್ನು ಬಳಕೆ ಮಾಡಿಕೊಂಡು ಸೈಬರ್ ಅಪರಾಧಗಳನ್ನು ನಿಯಂತ್ರಿಸಿ ಎಂದು ಪೊಲೀಸರಿಗೆ ತಾಕೀಯತು ಮಾಡಿದರು.

ಪೊಲೀಸರು ಧೈರ್ಯದಿಂದ ಕೆಲಸ ಮಾಡಬೇಕು. ಬಲಾಢ್ಯರ ಕೈಯಲ್ಲಿ ಅಧಿಕಾರ ವಿದ್ದರೆ ಸಮ ಸಮಾಜ ನಿರ್ಮಾಣ ಅಸಾಧ್ಯ ಎಂದು ಡಾ. ಬ. ಆರ್. ಅಂಬೇಡ್ಕರ್ ಹೇಳಿದ್ದರು. ಶ್ರೀಮಂತರು ಹಣ ಬಲದಿಂದ ಪೊಲೀಸರನ್ನು ದುರುಪಯೋಗ ಮಾಡಿಕೊಳ್ಳುವ ಪ್ರಯತ್ನ ಮಾಡುತ್ತಾರೆ. ಪೊಲೀಸರು ಇಂತಹ ಆಮಿಷಗಳಿಗೆ ಒಳಗಾಗದೆ ಧೈರ್ಯದಿಂದ ಕೆಲಸ ಮಾಡಿ ಪೊಲೀಸ್ ವೃತ್ತಿಯಲ್ಲಿ ಯಶಸ್ಸು ಸಾಧಿಸಬೇಕು ಎಂದು ಕಿವಿ ಮಾತು ಹೇಳಿದರು. ಗೃಹ ಇಲಾಖೆಯಲ್ಲಿ ಖಾಲಿ ಇರುವ 8 ಸಾವಿರ ಹುದ್ದೆಗಳನ್ನು ಭರ್ತಿ ಮಾಡುವುದಾಗಿ ಬಜೆಟ್‌ನಲ್ಲಿ ಘೋಷಿಸಿದ್ದೇನೆ. ಅದನ್ನು ಮಾಡಿಯೇ ತೀರುತ್ತೇನೆ. ಖಾಲಿ ಇದ್ದ 4911 ಪೊಲೀಸ್ ಹುದ್ದೆಗಳನ್ನು ಮೂರು ವರ್ಷಗಳಲ್ಲಿ ಭರ್ತಿ ಮಾಡಲಾಗಿದೆ. ಇಂದಿನಿಂದ ತರಬೇತಿ ಪೂರ್ಣಗೊಂಡ 277 ಸಬ್ ಇನ್ಸ್‌ಪೆಕ್ಟರ್‌ಗಳು ಸೇವೆಗೆ ಸೇರ್ಪಡೆಯಾಗುತ್ತಿದ್ದಾರೆ ಎಂದರು ಸರ್ಕಾರ ಸದಾ ನಿಮ್ಮೊಂದಿಗಿರುತ್ತದೆ. ಜನರ ರಕ್ಷಣೆ ಕೆಲಸವನ್ನು ಧೈರ್ಯದಿಂದ ಆಮಿಷಕ್ಕೊಳಗಾಗದೆ ಮಾಡಿ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು.

## ‘ಉಪಚುನಾವಣೆ ಫಲಿತಾಂಶಕ್ಕೂ, ಸಿಎಂ ಕುರ್ಚಿಗೂ ಲಿಂಕ್ ಮಾಡಬೇಡಿ’: ಸಿಎಂ ಸಿದ್ದರಾಮಯ್ಯ ಹೀಗೆ ಹೇಳಿದ್ಯಾಕೆ?



ಮೈಸೂರು: ಮುಂದಿನ ತಿಂಗಳು ನಡೆಯಲಿರುವ ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಇಂದು ಮೈಸೂರು ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ ಅವರು, ಉಪ ಚುನಾವಣೆಯಲ್ಲಿ ನಮ್ಮ ಪಕ್ಷವು ಎರಡೂ ಸ್ಥಾನಗಳನ್ನು ಉಳಿಸಿಕೊಳ್ಳುತ್ತದೆ ಎಂದರು.

ದಾವಣಗೆರೆಯಲ್ಲಿ ಪಕ್ಷದ ಅಧಿಕೃತ ಅಭ್ಯರ್ಥಿ ವಿರುದ್ಧದ ಬಂಡಾಯವನ್ನು ಶಮನಗೊಳಿಸಲಾಗಿದೆ, ಬಂಡಾಯ ಅಭ್ಯರ್ಥಿ ಸಾದಿಕ್ ಪೈಲ್ವಾನ್ ಅವರು ಸ್ಪರ್ಧೆಯಿಂದ ಹಿಂದೆ ಸರಿದಿದ್ದಾರೆ ಎಂದು ಸಿಎಂ ತಿಳಿಸಿದರು.

ಮಾರ್ಚ್ 30 ಮತ್ತು 31 ರಂದು ಬಾಗಲಕೋಟೆಯಲ್ಲಿ ಮತ್ತು ಏಪ್ರಿಲ್ 1 ಹಾಗೂ 2 ರಂದು ದಾವಣಗೆರೆಯಲ್ಲಿ ಪಕ್ಷದ ಅಭ್ಯರ್ಥಿಗಳ ಪರ ಪ್ರಚಾರ ನಡೆಸುವುದಾಗಿ ಸಿದ್ದರಾಮಯ್ಯ ಹೇಳಿದರು.

ಉಪಚುನಾವಣೆ ಫಲಿತಾಂಶಕ್ಕೂ ಮತ್ತು ನಾಯಕತ್ವ ಬದಲಾವಣೆಗೂ ಯಾವುದೇ ಸಂಬಂಧ ಇಲ್ಲ. ಎರಡಕ್ಕೂ ಲಿಂಕ್ ಮಾಡಬೇಡಿ. ಹೈಕಮಾಂಡ್ ಒಪ್ಪಿದರೆ ಇನ್ನೂ ಎರಡು ಬಜೆಟ್ ಮಂಡಿಸುತ್ತೇನೆ ಎಂದು ಸಿಎಂ ಹೇಳಿದರು.

ಪಕ್ಷವು "ಖಂಡಿತವಾಗಿಯೂ ಉಪಚುನಾವಣೆಯಲ್ಲಿ ಎರಡೂ ಕ್ಷೇತ್ರಗಳಲ್ಲಿ ಗೆಲ್ಲುತ್ತದೆ" ಮತ್ತು 2028ರ ವಿಧಾನಸಭಾ ಚುನಾವಣೆಯಲ್ಲೂ ಗೆದ್ದು ಅಧಿಕಾರ ಉಳಿಸಿಕೊಳ್ಳುತ್ತದೆ ಎಂದು ಹೇಳಿದರು.

ಉಪಚುನಾವಣೆ ಫಲಿತಾಂಶವು ಜನ ಸರ್ಕಾರಕ್ಕೆ ಮಾಡುವ ಆಶೀರ್ವಾದ ಆಗಲಿದೆ. ಯಾವುದೇ ಚುನಾವಣೆ ನಡೆದರೂ ನಾವೇ ಗೆಲ್ಲುತ್ತೇವೆ ಎಂದು ಸಿಎಂ ವಿಶ್ವಾಸ ವ್ಯಕ್ತಪಡಿಸಿದರು.

## ಮೇಟಿ ಅವರ ಜನಪರ ಕಾಳಜಿ, ಕ್ಷೇತ್ರದ ಮೇಲಿದ್ದ ಅವರ ಪ್ರೀತಿಯನ್ನು ಮುಂದುವರಿಸಲು ಅವರಿಗೆ ಮತ ನೀಡಿ: ಸಚಿವ ಸತೀಶ್ ಜಾರಕಿಹೊಳಿ



**ಬೆಳಗಾವಿ ವಾರ್ತೆ ಬಾಗಲಕೋಟೆ:** ಅಭಿವೃದ್ಧಿಯೇ ಕಾಂಗ್ರೆಸ್ ಪಕ್ಷದ ಮೂಲಮಂತ್ರವಾಗಿದ್ದು, ಅಭಿವೃದ್ಧಿ ಬಯಸುವ ತಾವು ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಅವರನ್ನು ಗೆಲ್ಲಿಸಬೇಕೆಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಐಹೊಳೆ, ಅಮೀನಗಡ ಹಾಗೂ ಕಮತಗಿ ಗ್ರಾಮಗಳಲ್ಲಿ ಪ್ರಚಾರ ನಡೆಸಿ, ಕಾಂಗ್ರೆಸ್ ಪಕ್ಷದ ಅಧಿಕೃತ ಅಭ್ಯರ್ಥಿ ಉಮೇಶ ಮೇಟಿ ಅವರ ಪರ ಮತಯಾಚಿಸಿ ಅವರು ಮಾತನಾಡಿದರು.

ದಿ. ಎಚ್.ವೈ. ಮೇಟಿ ಅವರ ಜನಪರ ಕಾಳಜಿ, ಕ್ಷೇತ್ರದ ಮೇಲಿದ್ದ ಅವರ ಪ್ರೀತಿಯನ್ನು ಮುಂದುವರಿಸಲು, ಅವರ ಸುಪುತ್ರ ಉಮೇಶ ಮೇಟಿ ಅವರಿಗೆ ಈ ಉಪಚುನಾವಣೆಯಲ್ಲಿ ಆಶೀರ್ವದಿಸಬೇಕೆಂದು ಮತದಾರರಲ್ಲಿ ವಿನಂತಿಸಿದರು.

ಐಹೊಳೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಪಕ್ಷದ ತತ್ವ ಸಿದ್ಧಾಂತ ಹಾಗೂ ಸರ್ಕಾರದ ಆಡಳಿತ ವೈಖರಿ ಮೆಚ್ಚಿ ಹಲವು ನಾಯಕರು ಮತ್ತು ಕಾರ್ಯಕರ್ತರು ಸಚಿವ ಸತೀಶ್ ಜಾರಕಿಹೊಳಿ ಅವರ ನೇತೃತ್ವದಲ್ಲಿ ಕಾಂಗ್ರೆಸ್‌ಗೆ ಸೇರ್ಪಡೆಯಾದರು.

ಬರುವ ಏಪ್ರಿಲ್ 9 ರಂದು ನಡೆಯಲಿರುವ ಚುನಾವಣೆಯಲ್ಲಿ ಹಸ್ತದ ಗುರುತಿಗೆ ಮತ ನೀಡುವ ಮೂಲಕ, ಸಾಮಾನ್ಯ ಜನರ ಧ್ವನಿಯಾಗಿ ಸೇವೆ ಮಾಡಲು ಅವರಿಗೆ ಒಂದು ಅವಕಾಶ ನೀಡಬೇಕೆಂದು ಮನವಿ ಮಾಡಲಾಯಿತು.

ಈ ಸಂದರ್ಭದಲ್ಲಿ ಶಾಸಕ ಎನ್.ಎಚ್. ಕೋನರೆಡ್ಡಿ, ಶಾಸಕ ಭೀಮಸೇನ ಬಿ. ಚಿಮ್ಮನಕಟ್ಟಿ, ಬಾಗಲಕೋಟೆ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಎಸ್.ಜಿ. ನಂಜಯ್ಯನಮಠ ಸೇರಿದಂತೆ ಸಾವಿರಾರೂ ಜನ ಕಾರ್ಯಕರ್ತರಿದ್ದರು.



ಬಾಗಲಕೋಟೆ: ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆ ಹಿನ್ನಲೆಯಲ್ಲಿ ನೀತಿ ಸಂಹಿತೆ ಜಾರಿಯಲ್ಲಿರುವದರಿಂದ ಮಹಾವೀರ ಜಯಂತಿಯನ್ನು ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಸರಳವಾಗಿ ಆಚರಿಸಲಾಯಿತು. ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ ಸೇರಿದಂತೆ ಇತರರು ಮಹಾವೀರರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಪಾಲಿಕೆಯಲ್ಲಿ ಕನ್ನಡಪರ ನಿರ್ಣಯಕ್ಕೆ ಕನ್ನಡಿಗರ ಪಟ್ಟು : ಸಿಎಂ ಬಳಿ ನಿಯೋಗ ಕೊಂಡೊಯ್ಯಲು ನಿರ್ಧಾರ



**ಬೆಳಗಾವಿ ವಾರ್ತೆ ಬೆಳಗಾವಿ :** "ಬೆಳಗಾವಿ ಕರ್ನಾಟಕದ ಅವಿಭಾಜ್ಯ" ಗಡಿ ವಿಷಯುದಲ್ಲಿ ಮಹಾಜನ್ ವರದಿ ಅಂತಿಮ ಎಂಬ ನಡುವೆ ನಿರ್ಣಯ ವನ್ನು ಮಹಾನಗರ ಪಾಲಿಕೆಂಯುಲ್ಲಿ ಅಂಗೀಕ'ರಿಸ'ಬ'ೀಕ'ಂಬ ಬೇಡಿಕೆಯನ್ನೊಳಗೊಂಡು ಕನ್ನಡ ಸಂಘಟನೆಗಳ ವಿವಿಧ ಹಕ್ಕೊತ್ತಾಯ ಸಂಬಂಧ' ಹೋರಾಟವನ್ನು ತೀವ್ರಗೊಳಿಸಲು ಏ.2 ನೇ ವಾರ ಮುಖ್ಯಮಂತ್ರಿ, ಗಡಿ ಉಸ್ತುವಾರಿ ಸಚಿವರು ಹಾಗೂ ರಾಜ್ಯದ ಮುಖ್ಯ ಕಾರ್ಯದರ್ಶಿಗಳ ಭೇಟಿಗಾಗಿ 12 ಕನ್ನಡ ಸಂಘಟನೆಗಳ ನಿಯೋಗವನ್ನು ಬೆಂಗಳೂರಿಗೆ ಕರೆದೊಯ್ಯಲು ಕನ್ನಡ ಸಂಘಟನೆಗಳ ಪದಾಧಿಕಾರಿಗಳು ನಿರ್ಧರಿಸಿದ್ದಾರೆ.

ಈ ಕುರಿತು ಹಿರಿಯ ಕನ್ನಡ ಹೋರಾಟಗಾರ ಅಶೋಕ ಚಂದರಗಿ ಅವರ ಅಧ್ಯಕ್ಷತೆಯಲ್ಲಿ ಸೋಮವಾರ ಪ್ರವಾಸಿ ಮಂದಿರದಲ್ಲಿ ನಡೆದ ಸಭೆಯಲ್ಲಿ ಈ ತೀರ್ಮಾನ ಕೈಕೊಳ್ಳಲಾಗಿದೆ.

ಬೆಳಗಾವಿ ಪಾಲಿಕೆಯಲ್ಲಿ ಕರ್ನಾಟಕ ಪರವಾದ ನಿರ್ಣಯುಗಳನ್ನು ಅಂಗೀಕರಿಸುವ ಸಂಬಂಧ ಉಪ ಮಹಾಪೌರ ಹನುಮಂತ ಕೊಂಗಾಲಿ ಅವರು ಕನ್ನಡ ಹೋರಾಟಗಾರ ಬಲರಾಮ ಮಾಸೇನಟ್ಟಿ ಅವರಿಗೆ ನೀಡಿದ ಭರವಸೆಯ ಬಗ್ಗೆ ಸಂತಸ ವ್ಯಕ್ತಪಡಿಸಿದ ಕನ್ನಡ ಸಂಘಟನೆಗಳ ಮುಖಂಡರು ನಿರ್ಣಯಗಳ ಬಗ್ಗೆ ಚರ್ಚಿಸಲು ಯಾರೇ ಆಹ್ವಾನ ನೀಡಿದರೂ ಚರ್ಚೆಗೆ ಸಿದ್ಧವಿರುವದಾಗಿ ತಿಳಿಸಿದರು.

“ಗಡಿವಿವಾದ ಸಂಬಂಧ ಮಹಾಜನ್ ವರದಿಯೇ ಅಂತಿಮ” ಹಾಗೂ “ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ” ಎಂಬ ನಿರ್ಣಯಗಳನ್ನು ಪಾಲಿಕೆಯಲ್ಲಿ ಅಂಗೀಕರಿಸುವಂತೆ ಆಗ್ರಹಿಸಿ ಸಮಾನ ಮನಸ್ಕ ಕನ್ನಡ ಪರ ಸಂಘಟನೆಗಳು ಪ್ರತ್ಯೇಕವಾಗಿ ಮಂಗಳವಾರದಿಂದ ಮಹಾಪೌರರಿಗೆ ಹಾಗೂ ಉಪ ಮಹಾಪೌರರಿಗೆ ಮನವಿ ಅರ್ಪಿಸಲು ಸಭೆಯಲ್ಲಿ ನಿರ್ಧರಿಸಲಾಯಿತು. ಕರ್ನಾಟಕ ರಾಜ್ಯೋತ್ಸವಕ್ಕೆ ಪ್ರವಾಸೋದ್ಯಮ ಇಲಾಖೆಯಿಂದ ನೀಡಲಾಗಿದ್ದ 50 ಲಕ್ಷ ರೂ.ಗಳ ಅನುದಾನದ ದುರ್ಬಳಕೆ ಬಗ್ಗೆ ಈಗಾಗಲೇ 12 ಕನ್ನಡ ಸಂಘಟನೆಗಳು ಮುಖ್ಯಮಂತ್ರಿಗಳಿಗೆ, ಗಡಿ ಉಸ್ತುವಾರಿ ಸಚಿವರಿಗೆ, ಮುಖ್ಯ ಕಾರ್ಯದರ್ಶಿಗಳಿಗೆ, ಪ್ರವಾಸೋದ್ಯಮ ಕಾರ್ಯದರ್ಶಿಗಳಿಗೆ ದೂರು ನೀಡಿದ್ದು ಈ ಬಗ್ಗೆ ಉನ್ನತ ಮಟ್ಟದಲ್ಲಿ ಚರ್ಚೆ ನಡೆದಿದೆ. ಈ ಬಗ್ಗೆ ತಮಗೆ ಅಧಿಕೃತವಾಗಿ ತಿಳಿಸಲಾಗಿದೆ ಎಂದು ಬಲರಾಮ ಮಾಸೇನಟ್ಟಿ ಅವರು ಸಭೆಗೆ ವಿವರಿಸಿದರು.

ಈ ಸಂಬಂಧ ಬೆಂಗಳೂರಿಗೆ ತೆರಳಲಿರುವ ನಿಯೋಗದ ಸಂದರ್ಭದಲ್ಲಿ ವಿಷಯವನ್ನು ಪ್ರಸ್ತಾಪಿಸಲಾಗುವುದೆಂದು ಅಶೋಕ ಚಂದರಗಿ ತಿಳಿಸಿದರು.

ರಾಜ್ಯ ಸರಕಾರ ನೀಡಿದ 7 ಕೋಟಿ.ರೂ.ಗಳ ಅನುದಾನದಲ್ಲಿ ಬೆಳಗಾವಿಯಲ್ಲಿ ನಿರ್ಮಿಸಲಾದ ಕನ್ನಡ ಭವನವನ್ನು ಸರಕಾರ ತನ್ನ ವಶಕ್ಕೆ ತೆಗೆದುಕೊಳ್ಳಬೇಕೆಂಬ ಬೇಡಿಕೆಯ ಬಗ್ಗೆ ಈಗಾಗಲೇ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಹಿರಿಯ ಅಧಿಕಾರಿಗಳು ಗಮನ ಹರಿಸಿದ್ದು ಮುಂದಿನ ದಿನಗಳಲ್ಲಿ ಕನ್ನಡ ಸಂಘಟನೆಗಳ ಬೇಡಿಕೆಯನ್ನು ಮತ್ತಷ್ಟು ತೀವ್ರಗೊಳಿಸಲು ಸಭೆಯಲ್ಲಿ ನಿರ್ಣಯಿಸಲಾಯಿತು.

ಬೆಳಗಾವಿ ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಲ್ಲಿ 2024 ರ ರಾಜ್ಯೋತ್ಸವ ದಿನದಂದು ಪ್ರತಿಷ್ಠಾಪಿಸಲಾಗಿದ್ದ ಹಲ್ಮಿಡಿ ಶಾಸನದ ಪ್ರತಿಕೃತಿಯು ನಾಪತ್ತೆಯಾಗಿದ್ದು ಇದನ್ನು ಒಂದು ವಾರದಳೊಗೆ ಮರು ಸ್ಥಾಪನೆ ಮಾಡಲು ನೀಡಲಾಗಿದ್ದ ಗಡುವನ್ನು ಇನ್ನೊಂದು ವಾರ ಕಾಲ ವಿಸ್ತರಿಸಲು ಸಭೆಯು ನಿರ್ಧರಿಸಿತು.

ಕಿತ್ತೂರು ಕನಾಟಕ ಸೇನೆಯು ರಾಜ್ಯಾಧ್ಯಕ್ಷ ಮಹಾದೇವ ತಳವಾರ, ಗಡಿನಾಡು ಕನ್ನಡಿಗರ ಸೇನೆಯು ರಾಜ್ಯಾಧ್ಯಕ್ಷ ಬಲರಾಮ ಮಾಸೇನಟ್ಟಿ, ಕರ್ನಾಟಕ ರಕ್ಷಣಾ ವೇದಿಕೆ (ಶಿವರಾಮೆಗೌಡ ಬಣ) ಜಿಲ್ಲಾಧ್ಯಕ್ಷ ವಾಜೀದ ಹಿರೇಕೋಡಿ, ಸರ್ವೋದಯು ಸಂಘದ ಅಧ್ಯಕ್ಷ ಶ್ರೀನಿವಾಸ ತಾಳೂಕರ, ಕನ್ನಡ ಹೋರಾಟಗಾರರಾದ ಬಾಳಪ್ಪ ಗುಡಗೇನಟ್ಟಿ, ಸಣ್ಣತಮ್ಮಾ ಮೂಕನವರ, ನಾಗೇಶ ಕೊಪ್ಪದ, ಮಲ್ಲಪ್ಪಾ ಗುಡಗೇನಟ್ಟಿ, ದಯಾನಂದ ಪವಾರ, ಈಶ್ವರಗೌಡ ಪಾಟೀಲ, ಸತೀಶ ನಾಯಕ ಫರಿದಾ ನದಾಫ್, ರಾಣಿ ಬೀಟಿ, ಸಂಗೀತಾ ಕಾಂಬಳೆ ಹಾಗೂ ಅರವಿಂದ ಸಿಂಗ್ ನೇರಲಿ ಸಭೆಯಲ್ಲಿ ಪಾಲ್ಗೊಂಡಿದ್ದರು.

## ಬೆಳಗಾವಿ ಜಿಲ್ಲಾ ಲೇಖಕಿಯರ ಸಂಘದ ವತಿಯಿಂದ ಒಂದು ದಿನದ ಪ್ರವಾಸ

**ಬೆಳಗಾವಿ ವಾರ್ತೆ ಬೆಳಗಾವಿ:** ಜಿಲ್ಲಾ ಲೇಖಕಿಯರ ಸಂಘದ ವತಿಯಿಂದ ಶನಿವಾರದಂದು ಲೇಖಕಿಯರ ಸಂಘದಿಂದ ಒಂದು ದಿನದ ಪ್ರವಾಸವನ್ನು ಹುಕ್ಕೇರಿ ತಾಲೂಕಿನ ಬೆಣಿವಾಡ ಗ್ರಾಮುದಲ್ಲಿರುವ ಚಂದನವನ ಪ್ರೇಕ್ಷಣಿಯ ಸ್ಥಳಕ್ಕೆ ಹೋಗಿಬರಲಾಯಿತು. ಇದೆ ಸಮಯದಲ್ಲಿ ಸ್ಥಳದಲ್ಲಿಯೆ ವಿಷಯ ಕೊಟ್ಟು ಆಶುಕಾವ್ಯ ರಚನೆಯನ್ನು ಸಂಘದ ಹಿರಿಯ ಸಾಹಿತಿ ಶ್ರೀಮತಿ ಸುನಂದಾ ಮುಳೆ ಇವರ ಅಧ್ಯಕ್ಷತೆಯಲ್ಲಿ ನಡೆಸ ಲಾಯಿತು. ಆಶುಕವಿಗೋಷ್ಟಿಯಲ್ಲಿ 20 ಕ್ಕೂ ಹೆಚ್ಚು ಸದಸ್ಯೆಯರು ಭಾಗವಹಿಸಿದ್ದರು.ಅಧ್ಯಕ್ಷಿಯ ನುಡಿಗಳನ್ನಾಡಿದ ಸುನಂದಾ ಮುಳೆಯವರು ಪ್ರಸ್ತುತ ವಿಷಯ ವಿದ್ಯಮಾನಗಳ ಕುರಿತ ಆಶುಕವನಗಳು ತುಂಬಾ ಚನ್ನಾಗಿವೆ ಎಂದು ಹೇಳಿದರು. ಸಂಘದ ಕಾರ್ಯದರ್ಶಿ ಆಶಾ ಯಮಕನಮರಡಿ ಸ್ವಾಗತಿಸಿದರು. ಸಂಘದ ಅಧ್ಯಕ್ಷರಾದ ಸುಮಾ ಕಿತ್ತೂರು ಉಪಾಧ್ಯಕ್ಷರಾದ ವಾಸಂತಿ ಮೇಳೆದ ಕಾರ್ಯಕಾರಿಣಿ ಸದಸ್ಯೆ ಸುನೀತಾ ನಂದೆನ್ನವರ ಪ್ರವಾಸದ ಆಯೋಜನೆಗೆ ಶ್ರಮಿಸಿದರು. ರಾಜನಂದಾ ಗಾರ್ಗಿ, ಹೀರಾ ಚೌಗಲೆ, ಶಾಲಿನಿ ಚಿನವಾರ, ಮೇಘಾ ಪಾಟೀಲ, ಪ್ರೇಮಾ ಪಾನಶೆಟ್ಟಿ, ಸ್ನೇಹಲತಾ, ಶುಭಾ ತೆಲಸಂಗ,ರೇಖಾ ಶ್ರೀನಿವಾಸ್,ಸರೋಜ ಇನ್ನುಳಿದವರು ಆಶುಕವಿಗೋಷ್ಟಿಯಲ್ಲಿ ಭಾಗವಹಿಸಿದ್ದರು.



# ಗುರುವಂದನೆ ಕಾರ್ಯಕ್ರಮ



**ಬೆಳಗಾವಿ ವಾರ್ತೆ ನವಲಗುಂದ:** ಸುಮಾರು ವರ್ಷಗಳ ನಂತರ, ವಿದ್ಯೆ ಧಾರೆ ಎರೆದ ವಿದಾರ್ಥಿಗಳನ್ನು ನೋಡುವ ಅವಕಾಶ ನಮಗೆ ಸಿಕ್ಕಿದ್ದು ನಮ್ಮೆಲ್ಲರ ಪುಣ್ಯ ತಮಗೆ ಧನ್ಯವಾದಗಳು ಎಂದು ಶಂಕರ ಮಹಾ ವಿದ್ಯಾಲಯದ ನಿವೃತ್ತ ಪ್ರಾಂಶುಪಾಲರಾದ ಡಾಃ ಬಿ.ಸಿ.ಪೂಜಾರ ಹೇಳಿದರು.

ಅವರು ಸ್ಥಳೀಯ ಶ್ರೀ ಶಂಕರ ಮಹಾ ವಿದ್ಯಾಲಯದಲ್ಲಿ ಹಳೆಯ ವಾಣಿಜ್ಯ ವಿದ್ಯಾರ್ಥಿಗಳು ಆಯೋಜಿಸಿದ್ದ ಗುರುವಂದನೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಬಿ.ಸಿ.ಪೂಜಾರ, ಬಿ.ಸಿ.ಹೊಂಬಳ,ಕೆ.ಎನ್. ಹದಗಲ, ಸಿ.ಎಸ್. ಹೊಸಮಠ, ಎಸ್.ಕೆ.ಜಂಗಳೆಪ್ಪಗೌಡ್ರ, ಎಸ್.ಕೆ.ದೋಟಿಕಲ್, ಜಿ.ಎಸ್.ಪಲ್ಲೇದ, ಎಸ್.ಬಿ.ಯಳ್ಳರ, ನಿವೃತ್ತ ಪ್ರಾಧ್ಯಾಪಕರಾದ ಪಿ.ಜಿ ಹಿರೇಮಠ, ಸಿ.ಬಿ.ಪೂಜಾರ, ಎಂ.ಸಿ.ಹಿರೇಮಠ, ಆರ್.ಎಸ್.ಗುರುಮಠ, ಎಸ್.ಬಿ.ಕುಂದಗೋಳ, ಎಂ.ಆಯ್.ಬುಳಗಣ್ಣವರ ಸೇರಿ ಸಮಸ್ತ ಗುರುವೃಂದವನ್ನು ಸನ್ಮಾನಿಸಿ ಗೌರವಿಸಲಾಯಿತು.

ಪದವಿ ಮಹಾ ವಿದ್ಯಾಲಯದ ಪ್ರಾಚಾರ್ಯರದ ಎಸ್.ವಿ.ಬಡಿಗೇರ ಅಧ್ಯಕ್ಷತೆ ವಹಿಸಿದ್ದರು. ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು ಮುಖ್ಯ ಅತಿಥಿಗಳಾದ ಜೆ.ಪಿ.ಲಮಾಣಿ ಭಾಗವಹಿಸಿದ್ದರು.

ಶ್ರೀಮತಿ ಸುನಿತಾ ಸಿದ್ರಾಮಶೆಟ್ಟರ, ವೇಣುಗೋಪಾಲ ಮದ್ವರಾಯಣ್ಣವರ ಹಾಗೂ ಶ್ರೀಮತಿ ಜ್ಯೋತಿ ಮೇಲಿನಮಠ ಕಳೆದು ಹೋದ ಕಾಲೇಜು ಜೀವನದ ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ, ಎನ್.ಸಿದ್ಯಾಮನಗೌಡರ, ಬಿ.ಎಫ್.ಕೊಟಗಿ, ಬಿ.ವಿ.ಮುದಿಗೌಡರ, ಮಲ್ಲಿಕಾರ್ಜುನಗೌಡ ಪಾಟೀಲ, ಶ್ರೀಮತಿ ಚಂದ್ರಿಕಾ ಪಾಟೀಲ, ಶ್ರೀಮತಿ ಸಪನಾ ಪಾಟೀಲ, ಶ್ರೀಮತಿ ಲಲಿತಾ ಬೆಂಡಿಗೇರಿ, ಶ್ರೀಮತಿ ರಾಜಶ್ರೀ ದೇಸಾಯಿ, ಇನ್ನಿತರ ವಾಣಿಜ್ಯ ವಿದಾರ್ಥಿ ವಿದ್ಯಾರ್ಥಿನಿಯರು ಹಾಗೂ ಶಂಕರ ಮಹಾ ವಿದ್ಯಾಲಯದ ಬೋಧಕೇತರ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

ಶ್ರೀಮತಿ ವೀಣಾ ಪುರಾಣಿಕ ಇವರ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಪ್ರಾರಂಭಗೊಂಡಿತು. ಕಾಂತೇಶ ಖಂಡಿಬಾಗಿಲ, ಸ್ವಾಗತಿಸಿದರು. ರವಿ ಮುಗಳಿ ಕಾರ್ಯಕ್ರಮ ನಡೆಸಿಕೊಟ್ಟರು. ಶ್ರೀಮತಿ ಶಾಂತಲಾ ಸೋಮನಕಟ್ಟಿ ಕಾರ್ಯಕ್ರಮ ನಿರೂಪಣೆ ಮಾಡಿದರು,ಶ್ರೀಮತಿ ಅನುರಾಧ ಹೆಬಸೂರ ಇವರು ಕಾರ್ಯಕ್ರಮ ವಂದನಾರ್ಪಣೆ ಮಾಡಿದರು.

# ಸಹಕಾರಿ ಸಂಘಗಳು ಗಟ್ಟಿಯಾದರೆ ಮಾತ್ರ ರೈತರು ಬೆಳೆಯಲು ಸಾಧ್ಯ



**ಬೆಳಗಾವಿ ವಾರ್ತೆ ಚನ್ನಮ್ಮನ ಕಿತ್ತೂರು:** ಸಹಕಾರಿ ಸಂಘಗಳು ಗಟ್ಟಿಯಾದರೆ ಮಾತ್ರ ರೈತರು ಬೆಳೆಯಲು ಸಾಧ್ಯವೆಂದು ಅರಭಾಂವಿ ಶಾಸಕ ಹಾಗೂ ಕೆಎಂಎಫ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ಹೇಳಿದರು. ವಿವಿಧ ಸಹಕಾರಿ ಸಂಘಗಳ ವತಿಯಿಂದ ಪಟ್ಟಣದ ರಾಣಿಚನ್ನಮ್ಮ ಸ್ಮಾರಕ ಭವನದಲ್ಲಿ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭ ಕಾರ್ಯಕ್ರಮ ದ ದೀಪ ಬೆಳಗಿಸಿ ಮಾತನಾಡಿದರು. ಸಂಸ್ಥೆ ಉಳಿಯಬೇಕಾದರೆ ಜಾತಿ, ಪಕ್ಷ, ಭೇಧ ಮರೆತು ಸರಿಯಾಗಿ ಸಂಘ–ಸಂಸ್ಥೆ ನಡೆಸಿದಾಗ ಬೆಳೆಯಲು ಮತ್ತು ಲಾಭಾಂಶ ಕಾಣಲು ಸಾಧ್ಯ. ರೈತರು ಹೆಚ್ಚಿಗೆ ಹೈನುಗಾರಿಕೆ ಮಾಡಿ ಕೆಎಂಎಫ್ ಸಂಘ ಬೆಳೆಸಿ, ರೈತರು ತಮ್ಮ ಮನೆಯಲ್ಲಿ ಹಸು ಸಾಕಿ ಇದರ ಜೊತೆಯಲ್ಲಿ ನಿಮ್ಮ ಉತ್ಪನ್ನ ಹೆಚ್ಚಿಸಿಕೊಳ್ಳಿ.

ಈ ಭಾಗದ ಶಾಸಕರು ಕ್ಷೇತ್ರಕ್ಕೆ ನೀರಾವರಿ ಯೋಜನೆ ತರುತ್ತಿದ್ದಾರೆ ಅವರಿಗೆ ನಿಮ್ಮ ಸಹಕಾರ ಸದಾ ಇರಲಿ. ಅದಲ್ಲದೇ ಮಲಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆಗೆ ಡಿಸಿಸಿ ಬ್ಯಾಂಕಿನಿಂದ ರೂ. 50 ಕೋಟಿ ಸಾಲ ನೀಡುತ್ತೇವೆ. ರೈತರ ಏಳಿಗೆಗಾಗಿ ನಾವು ಸದಾ ಬದ್ಧರಿದ್ದೇವೆಂದರು.

ಮಾಜಿ ಸಂಸದ ಹಾಗೂ ಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಣ್ಣಾಸಾಹೇಬ ಜೊಲ್ಲೆ ಉದ್ಘಾಟಿಸಿ ಮಾತನಾಡಿ ಡಿಸಿಸಿ ಬ್ಯಾಂಕಿನಿಂದ ಎಲ್ಲ ರೈತರಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಅದರ ಚುಕ್ಕಾಣಿ ಹಿಡಿದಿದ್ದೇನೆ. ರಾಜ್ಯದಲ್ಲಿ 0% ದಲ್ಲಿ ಸಾಲವಿತರಿಸುವ ಬ್ಯಾಂಕ ಎಂದರೆ ಅದು ಡಿಸಿಸಿ ಬ್ಯಾಂಕ ಮಾತ್ರ. ಯಾರು ಎಷ್ಟೇ ವಿರೋಧ ಮಾಡಿದರೂ ದಿನದಲ್ಲಿ 25 ರಿಂದ 30 ಕೋಟಿ ಠೇವಣಿ ಬರುತ್ತಿದೆ. ಬರುವ ದಿನಗಳಲ್ಲಿ ರಾಜ್ಯಕ್ಕೆ ಹಾಗೂ ದೇಶಕ್ಕೆ ಮೊದಲನೆ ಸ್ಥಾನ ಗಳಿಸುವ ಪ್ರಯತ್ನದಲ್ಲಿದ್ದೇವೆಂದರು.

ಶಾಸಕ ಬಾಬಾಸಾಹೇಬ ಪಾಟೀಲ ಮಾತನಾಡಿ ಒಕ್ಕಲುತನ ನಂಬಿ ಕುಳಿತುಕೊಳ್ಳಬಾರದು ರೈತರು ಇದರ ಜೊತೆಗೆ ಹೈನುಗಾರಿಕೆ ಮಾಡಬೇಕು ಅಂದಾಗ ಮಾತ್ರ ರೈತರು ಏಳಿಗೆಯಾಗಲು ಸಾಧ್ಯ. ಇಂದಿನ ಕಾಲದಲ್ಲಿ ನಮ್ಮ ಉತ್ಪನ್ನ ಹೆಚ್ಚಾಗುವ ಕಸುಬು ಹೂಡಿಕೊಂಡು ಮುಂದೆ ಬರಬೇಕೆಂದು ಸಲಹೆ ನೀಡಿದರು.

ಮಾಜಿ ತಾಪಂ ಅಧ್ಯಕ್ಷ ಹಾಗೂ ಕೆಎಂಎಫ್ ನಿರ್ದೇಶಕ ಬಸವರಾಜ ಪರವಣ್ಣವರ ಮಾತನಾಡಿ ರೈತರು ಸಂಘ–ಸಂಸ್ಥೆಗಳಲ್ಲಿ ಸಾಲ ತೆಗೆದುಕೊಂಡು ಮರುಪಾವತಿಸಬೇಕು. ಅಂದಾಗ ಮಾತ್ರ ಸಂಘ ಬೆಳೆಯಲು ಸಾಧ್ಯ. ಅದರ ಜೊತೆಯಲ್ಲಿ ಸಾಲ ವಸೂಲಾತಿಯು ಆಗಬೇಕು. ಮುಂಬರುವ ದಿನಗಳಲ್ಲಿ ಕೆಎಂಎಫ್‌ದಿಂದ ಹಸು ಸಾಕಲು ಸಾಲನೀಡುವ ವಿಚಾರವಿದೆ ಅದರ ಲಾಭ ರೈತರು ಪಡೆದುಕೊಳ್ಳಬೇಕು. ಶಾಸಕ ಬಾಲಚಂದ್ರ ಜಾರಕಿಹೊಳಿ, ಶಾಸಕ ಬಾಬಾಸಾಹೇಬ ಪಾಟೀಲ, ವಿಪ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಮಾಜಿ ಜಿಪಂ ಸದಸ್ಯ ಬಿಸಿ ಪಾಟೀಲ ಮಾತನಾಡಿದರರು. ಪಪಂ ಅಧ್ಯಕ್ಷ ಜೈಸಿದ್ರಾಮ ಮಾರಿಹಾಳ, ಸೊ.ಸ.ಸ.ಕಾ. ಅಧ್ಯಕ್ಷ ರಮೇಶ ಬಾಳೆಕುಂದ್ರಿಗಿ, ಜಗದೀಶ ಗಟನಟ್ಟಿ, ಸಂಗಮೇಶ ಪರವಿನಾಯ್ಕರ, ಹನೀಫ್ ಸುತಗಟ್ಟಿ, ಬಾಬು ಕಟ್ಟಿ, ಶಂಕರ ಹೊಳಿ, ಮ.ಸ.ಸ.ಕಾ. ಉಪಾಧ್ಯಕ್ಷ ಬಸನಗೌಡ ಪಾಟೀಲ, ಕೆಎಂಎಫ್ ಎಂಡಿ ಶ್ರೀಕಾಂತ, ಎನ್.ಜಿ.ಕಲಾವಂತ, ರಾಮನಗೌಡ ಪಾಟೀಲ, ಅಶಪಾಕ ಹವಾಲ್ದಾರ, ಕೃಷ್ಣಾ ಬಾಳೇಕುಂದ್ರಗಿ, ಸುನೀಲ್ ಉಪಸ್ಥಿತರಿದ್ದರು.

# ವೀರಶೈವ ಪಂಚಸೂತ್ರೀಯ ಪ್ರವಚನ' ಮೇರು ದಾರ್ಶನಿಕ ಕೃತಿ




ಧಾರವಾಡ: ಜೀವಾತ್ಮ ಪರಮಾತ್ಮನಾಗಲು ಅನನ್ಯವಾದ ಉತ್ಕೃಷ್ಟ ಅಲೌಕಿಕ ಗಾಢ ಚಿಂತನೆಯನ್ನು ಬೋಧಿಸುವ 'ವೀರಶೈವ ಪಂಚಸೂತ್ರೀಯ ಪ್ರವಚನ' ಒಂದು ಮೇರು ದಾರ್ಶನಿಕ ಕೃತಿಯಾಗಿ ಎಲ್ಲರ ಗಮನಸೆಳೆದಿದೆ ಎಂದು ವೀರಶೈವ ಧರ್ಮದ ಪಂಚಪೀಠಗಳಲ್ಲಿ ಒಂದಾದ ಕಾಶಿ ಜ್ಞಾನ ಪೀಠದ ಶ್ರೀಜಗದ್ಗುರು ಡಾ. ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು ಪ್ರತಿಪಾದಿಸಿದರು.

ಅವರು ನಗರದ ಚರಂತಿಮಠ ಗಾರ್ಡನ್‌ದಲ್ಲಿ ಹಮ್ಮಿಕೊಂಡಿದ್ದ ಶ್ರೀಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ 'ವೀರಶೈವ ಪಂಚಸೂತ್ರೀಯ ಪ್ರವಚನ' ಕೃತಿಯ ಲೋಕಾರ್ಪಣೆ ಸಮಾರಂಭದ ಸಾನ್ನಿಧ್ಯವಹಿಸಿ ಮಾತನಾಡುತ್ತಿದ್ದರು. ವೀರಶೈವವು ಯಾವುದೋ ಒಂದು ಜಾತಿ, ವರ್ಗ, ಪಂಗಡವನ್ನು ಸೂಚಿಸದೇ ಅದು ಶಿವ–ಜೀವರ ಆಧ್ಯಾತ್ಮದ ಅನುಸಂಧಾನ ಮಾರ್ಗವಾಗಿದೆ. ಈ ಪಥದಲ್ಲಿ ಮುನ್ನಡೆಯಲು ಯಾವುದೇ ವ್ಯಕ್ತಿಯು ಶ್ರೀಗುರುವಿನಿಂದ ಇಷ್ಟಲಿಂಗ ದೀಕ್ಷೆಯನ್ನು ಸಂಪಾದಿಸಿ ಭಕ್ತಿಯು ಬದ್ಧತೆಯಲ್ಲಿ ಹೆಜ್ಜೆಹಾಕಲು ಸದಾಶಿವನ ಪ್ರಥಮ ಸೃಷ್ಟಿಯಲ್ಲಿ ಅವತರಿಸಿದ ಶ್ರೀಜಗದ್ಗುರು ಪಂಚಾಚಾರ್ಯರು 5 ಜನ ಮಹರ್ಷಿಗಳಿಗೆ ಬೋಧಿಸಿದ ವಿಶಿಷ್ಟ ತತ್ವ ಪ್ರತಿಪಾದನೆಯೇ ವೀರಶೈವ ಪಂಚಸೂತ್ರಗಳು ಎಂದರು. ಅಕ್ಕಿಆಲೂರು ಮುತ್ತಿನಕಂತಿಮಠದ ಶ್ರೀಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿದರು.

ಶ್ರೀಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವವನ್ನು ಮಾಜಿ ಶಾಸಕ ಅಮೃತ ದೇಸಾಯಿ ಉದ್ಘಾಟಿಸಿದರು.

# "ಅಥಣಿ ತಾಲೂಕಿನ ಗ್ರಾಮೀಣ ಭಾಗದ ಮೂಲಸೌಕರ್ಯ ವೃದ್ಧಿ, ರೈತರ ಹಿತರಕ್ಷಣೆ ಹಾಗೂ ಶೈಕ್ಷಣಿಕ ಪ್ರಗತಿಗೆ ನಮ್ಮ ಸರ್ಕಾರ ಸಂಪೂರ್ಣ ಬದ್ಧವಾಗಿದೆ,"



**ಬೆಳಗಾವಿ ವಾರ್ತೆ ಅಥಣಿ:** "ಅಥಣಿ ತಾಲೂಕಿನ ಗ್ರಾಮೀಣ ಭಾಗದ ಮೂಲಸೌಕರ್ಯ ವೃದ್ಧಿ, ರೈತರ ಹಿತರಕ್ಷಣೆ ಹಾಗೂ ಶೈಕ್ಷಣಿಕ ಪ್ರಗತಿಗೆ ನಮ್ಮ ಸರ್ಕಾರ ಸಂಪೂರ್ಣ ಬದ್ಧವಾಗಿದೆ," ಎಂದು ಅಥಣಿ ಶಾಸಕ ಹಾಗೂ ಮಾಜಿ ಉಪ ಮುಖ್ಯಮಂತ್ರಿ ಲಕ್ಷ್ಮಣ ಸವದಿ ಹೇಳಿದರು.

ಅವರು ತಾಲೂಕಿನ ಅಬ್ಬಿಹಾಳ ರಸ್ತೆ ಹಾಗೂ ದರೂರನಿಂದ ಖವಟಕೊಪ್ಪದವರೆಗೆ ನೂತನ ರಸ್ತೆ ನಿರ್ಮಾಣ ಕಾಮಗಾರಿಗಳಿಗೆ ಚಾಲನೆ ನೀಡಿ, ದರೂರ ಗ್ರಾಮದ ಬನ್ನಿವರಿ ತೋಟದ ವಸತಿಗಳಿಗೆ 'ನಿರಂತರ ಜ್ಯೋತಿ' ವಿದ್ಯುತ್ ಸಂಪರ್ಕ ಕಲ್ಪಿಸುವ ಯೋಜನೆಗೆ ಚಾಲನೆ ನೀಡಿ ಮಾತನಾಡಿದರು.

ಕೃಷ್ಣಾ ನದಿಯ ನೀರಿನ ಸಮಸ್ಯೆಯ ಕುರಿತು ಮಾತನಾಡಿದ ಅವರು, "ಪ್ರತಿ ವರ್ಷ ಮಹಾರಾಷ್ಟ್ರಕ್ಕೆ ಹಣ ಪಾವತಿಸಿ ನೀರು ಪಡೆಯುವ ಅನಿವಾರ್ಯತೆ ಇದೆ. ಇದಕ್ಕೆ ಶಾಶ್ವತ ಪರಿಹಾರವಾಗಿ ಆಲಮಟ್ಟಿ ಜಲಾಶಯದಿಂದ ಹಿಪ್ಪರಗಿ ಬ್ಯಾರೇಜ್‌ವರೆಗೆ 10 ಅಡಿ ವ್ಯಾಸದ ಪೈಪ್‌ಲೈನ್ ಮೂಲಕ ನೀರು ಹರಿಸುವ ಬೃಹತ್ ಯೋಜನೆಯ ಡಿಪಿಆರ್ ಸಿದ್ಧಪಡಿಸಿ ಉಪ ಮುಖ್ಯಮಂತ್ರಿಗಳಿಗೆ ಸಲ್ಲಿಸಿದ್ದೇನೆ. ಈ ಯೋಜನೆ ಜಾರಿಯಾದರೆ ಅಥಣಿ ಸೇರಿದಂತೆ ನಾಲ್ಕೈದು ತಾಲೂಕುಗಳ ನೀರಿನ ಸಮಸ್ಯೆ ಶಾಶ್ವತವಾಗಿ ದೂರವಾಗಲಿದೆ," ಎಂದು ವಿಶ್ವಾಸ ವ್ಯಕ್ತಪಡಿಸಿದರು.

"ಹಿಪ್ಪರಗಿ ಬ್ಯಾರೇಜ್ ಗೇಟ್‌ಗಳನ್ನು ಅಳವಡಿಸಿ 25 ವರ್ಷಗಳಾಗಿವೆ. ತಾಂತ್ರಿಕ ಕಾರಣದಿಂದ ಗೇಟ್ ಮುರಿದು 3 ಟಿಎಂಸಿ ನೀರು ವ್ಯರ್ಥವಾಗಿದೆ. ಈ ಬಗ್ಗೆ ಸಿಎಂ ಹಾಗೂ ಡಿಸಿಎಂ ಅವರಿಗೆ ಮನವರಿಕೆ ಮಾಡಿಕೊಟ್ಟಿದ್ದು, ತಾಂತ್ರಿಕ ವರದಿ ಬಂದ ತಕ್ಷಣ ಹೊಸ ಗೇಟ್‌ಗಳನ್ನು ಅಳವಡಿಸಲಾಗುವುದು. ಪ್ರಸ್ತುತ ಬೇಸಿಗೆಯಲ್ಲಿ ಕುಡಿಯುವ ನೀರಿಗೆ ತೊಂದರೆಯಾಗದಂತೆ ಕ್ರಮ ವಹಿಸಲಾಗಿದೆ," ಎಂದರು.

ಅಥಣಿಯ ಶೈಕ್ಷಣಿಕ ಇತಿಹಾಸದಲ್ಲಿ ಇದೊಂದು ಮೈಲಿಗಲ್ಲು ಎಂದ ಶಾಸಕರು, "ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಜೆಟ್‌ನಲ್ಲಿ ಅಥಣಿ ಕೃಷಿ ಕಾಲೇಜಿಗೆ 508 ಕೋಟಿ ರೂ. ಮಂಜೂರಾತಿ ನೀಡಿದ್ದಾರೆ. ಕೊಟ್ಟಲಗಿ ಅಮ್ಮಾಜೇಶ್ವರಿ ಯೋಜನೆ ಉದ್ಘಾಟನೆಗೆ ಮುಖ್ಯಮಂತ್ರಿಗಳು ಆಗಮಿಸಿದಾಗ ಕೃಷಿ ಕಾಲೇಜು ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಲಿದ್ದಾರೆ. ಅಲ್ಲದೆ, ತೋಟದ ಪಟ್ಟಿಯ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕಾಗಿ ಅನುಕೂಲ ಆಗುವ ನಿಟ್ಟಿನಲ್ಲಿ ತೋಟದ ವಸತಿಗಳಿಗೆ 24 ಗಂಟೆ ವಿದ್ಯುತ್ ನೀಡುವ ನಿರಂತರ ಜೊತಿ ಯೋಜನೆಗೆ ಚಾಲನೆ ನೀಡಲಾಗಿದೆ," ಎಂದು ತಿಳಿಸಿದರು.

ಈ ವೇಳೆ ಮುಖಂಡರಾದ ಸುರೇಶ ಮಾಯಣ್ಣವರ, ಶಿವರುದ್ರ ಗುಳ್ಳಪ್ಪನವರ, ವಿನಾಯಕ ಬಾಗಡಿ, ಅರ್ಜುನ್ ನಾಯಕ, ಶ್ರೀಶೈಲ ನಾಯಕ, ಶಿವು ನಾಯಕ, ಸಾತಗೌಡ ಪಾಟಿಲ, ಬಾಳಪ್ಪ ಗುಮತಾಜ, ಮಲ್ಲಿಕಾರ್ಜುನ ನಾಯಕ, ಶೇಖರ್ ಕನಕರೆಡ್ಡಿ, ಜೆ.ಡಿ. ಗುರುನಾಥ್ ಸಂಪನ್ನವರ, ಅಮೀರ್ ಖತೀಬ್, ಅಣ್ಣಾಸಾಬ ಚೌಗಲಾ, ರಾಜು ಅಲಬಾಳ, ಮಲ್ಲಿಕಾರ್ಜುನ ಮಗದುಮ, ಪುಟ್ಟು ಸಿಂಧೆ, ಮಲ್ಲಿಕಾರ್ಜುನ ದಳವಾಯಿ, ಅನಿಲ ನರೋಡೆ, ಪ್ರಭು ಬೊಮ್ಮನವರ, ಗಣಪತಿ ಭೋಸ್ಲೆ, ಅಪ್ಪಾಸಾಬ ಅಲಬಾಳ ಸೇರಿದಂತೆ ಹಲವು ಅಧಿಕಾರಿಗಳು ಹಾಗೂ ಗಣ್ಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.



ನಗರದಲ್ಲಿ ಮಹಾಶಿವಶರಣೆ ಅಕ್ಕಮಹಾದೇವಿ ಜಯಂತಿ ಹಾಗೂ ಅಕ್ಕನ ಬಳಗ 88ನೇ ವಾರ್ಷಿಕೋತ್ಸವ ಸಮಾರಂಭ ಶ್ರೀ ಗುರುಸಿದ್ಧ ರಾಜಯೋಗಿಂದ್ರ ಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ಜರುಗಿತು. ನಿರ್ಮಲಾ ಅಂಗಡಿ ಮತ್ತಿತರರು ಉಪಸ್ಥಿತರಿದ್ದರು.



ಧಾರವಾಡದ ಗುಲಗಂಜಿ ಕೊಪ್ಪದಲ್ಲಿರುವ ಶ್ರೀ ಹನುಮಂತ ದೇವರ ದೇವಸ್ಥಾನದ ಸಮೀಪ ನೂತನವಾಗಿ ನಿರ್ಮಾಣವಾಗುತ್ತಿರುವ ರಥಮನೆ ಕಾಮಗಾರಿಯನ್ನು ಮಾಜಿ ಮಹಾಪೌರರು ಹಾಗೂ ಸಭಾನಾಯಕರಾದ ಈರೇಶ ಅಂಚಟಗೇರಿ ಪರಿಶೀಲಿಸಿದರು. ಗಂಗಾಸಾಹೇಬ ದೇಸಾಯಿ, ನಾಗೇಶ ಕುಸುಗಲ, ಪುಟ್ಟು ಚವ್ಹಾನ, ಶಿವಾನಂದ ಗಿರಿಯಪ್ಪನವರ ಉಪಸ್ಥಿತರಿದ್ದರು.

# ಕಲ್ಲೋಳಿ ಜೈನ ಬಸದಿಯಲ್ಲಿ ಮಹಾವೀರರ 2625ನೇ ಜಯಂತಿ ಆಚರಣೆ

**ಬೆಳಗಾವಿ ವಾರ್ತೆ ಮೂಡಲಗಿ:** ತಾಲೂಕಿನ ಕಲ್ಲೋಳಿ ಪಟ್ಟಣದಲ್ಲಿನ ತ್ರಿಕೂಟ ಜೈನ ಬಸದಿ ಯಲ್ಲಿ ಭಗವಾನ ಮಹಾವೀರರ 2625ನೇ ಜಯಂತಿ ಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು,

ಬಾಲ ಮಹಾವೀರ ಸ್ವಾಮಿಯ ತೊಟ್ಟಿಲು ಹಾಕುವ ಕಾರ್ಯಕ್ರಮ ನಡೆಯಿತು ಮಹಾವೀರನ ಸ್ವಾಮೀಜಿಯ ತಾಯಿಯಾಗಿ ಶ್ರಾವಕಿ ಜ್ಯೋತಿ ಬೆಲ್ಲದ, ವಹಿಸಿದ್ದರು, ಪ್ರಯುಕ್ತ ಬಸದಿಯ ಮಹಾವೀರ ಸ್ವಾಮಿಯ,ಶಾಂತಿನಾಥ ತೀರ್ಥಂಕರ,ಪಾರ್ಶ್ವನಾಥ ತೀರ್ಥಂಕರ ಜಲಾ ಅಭಿಷೇಕ ಕ್ಷೀರಾಭಿಷೇಕ ನಂತರ, ಬಾಲ ಮಹಾವೀರ ನ ರಾಜ ಪೋಷಾಕ್ ತೊಡಿಸಿ ನೃತ್ಯದ ಮೂಲಕ ತೊಟ್ಟಿಲು ಹಾಕುವ ಕಾರ್ಯಕ್ರಮ ಸಂಭ್ರಮದಿಂದ ಜರುಗಿತು. ಶ್ರಾವಕರಾದ ಪ್ರಕಾಶ ಗರಗಟ್ಟಿ, ರತ್ನಾಕರ್ ಅಥಣಿ, ಸುನಿಲ್ ಕುಸನಾಳೆ, ತವಣಪ್ಪ ಉಂದ್ರಿ , ಶ್ರಾವಕಿಯಿಯರಾದ ಶ್ರೀಮತಿ ವಿಲಾಸಿನಿ ಗರಗಟ್ಟಿ , ವಿದ್ಯಾ ಶೀತಲ್ ಅಥಣಿ, ತೇಜಸ್ವಿನಿ ಗರಗಟ್ಟಿ, ಶ್ರುತಿ ಕುಸನಾಳೆ , ಲಕ್ಷ್ಮೀ ಉಂದ್ರಿ ಮತ್ತಿತರರು ಭಾಗವಹಿಸಿದ್ದರು,



ಮೂಡಲಗಿ: ಕಲ್ಲೋಳಿಯ ತ್ರಿಕೂಟ ಜೈನ ಬಸದಿಯಲ್ಲಿ ಭಗವಾನ ಮಹಾವೀರರ 2625ನೇ ಜಯಂತಿ ನಿಮಿತ್ಯ ಬಾಲ ಮಹಾವೀರ ಸ್ವಾಮಿಯ ತೊಟ್ಟಿಲು ಹಾಕುವ ಕಾರ್ಯಕ್ರಮ ನಡೆಯಿತು



ಬಿಜೆಪಿ ಹು.ಧಾ ಪೂರ್ವ ವಿಧಾನಸಭಾ ಕ್ಷೇತ್ರದ ವತಿಯಿಂದ ಪಂಡಿತ್ ದೀನದಯಾಳ ಉಪಾಧ್ಯಾಯ ಪ್ರಶಿಕ್ಷಣ ಅಭಿಯಾನ 2026 ಉದ್ಘಾಟನೆ ಕಾರ್ಯಕ್ರಮ ನಗರದ ವಾಸವಿ ಮಹಲ್‌ನಲ್ಲಿ ನಡೆಯಿತು.

# ಗ್ರಾಮೀಣರ ಶ್ರಮ ಜೀವನ ವಿಧಾನವೇ ಜನಪದ ಸಂಸ್ಕೃತಿ –ಡಾ.ರಾಜು ಕಂಬಾರ



ಮೂಡಲಗಿ: ಸಮೀಪದ ಧರ್ಮಟ್ಟಿ ಗ್ರಾಮದಲ್ಲಿ ನಡೆದ ಮೂಡಲಗಿ ಎಸ್ ಎಸ್ ಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಎನ್ ಎಸ್ ಎಸ್ ಶಿಬಿರದ ಜನಪದ ಸಂಸ್ಕೃತಿ ಅಂದು–ಇಂದು ಕಾರ್ಯಕ್ರಮಕ್ಕೆ ಸಸಿಗೆ ನೀರುಣಿಸುವ ಮೂಲಕ ಗಣ್ಯರು ಚಾಲನೆ ನೀಡಿದರು.

**ಬೆಳಗಾವಿ ವಾರ್ತೆ ಮೂಡಲಗಿ :** ಗ್ರಾಮೀಣ ಪ್ರದೇಶದ ಸಮುದಾಯವೊಂದರ ಶ್ರಮ ಜೀವನ ವಿಧಾನವೇ ಜನಪದ ಸಂಸ್ಕೃತಿ ಎಂದು ಜಾನಪದ ಚಿಂತಕ ಹಾಗೂ ಮೂಡಲಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ಉಪನ್ಯಾಸಕ ಡಾ. ರಾಜು ಕಂಬಾರ ಹೇಳಿದರು

ಅವರು ತಾಲ್ಲೂಕಿನ ಧರ್ಮಟ್ಟಿ ಗ್ರಾಮದಲ್ಲಿ ಪಟ್ಟಣದ ಶ್ರೀಪಾದ ಭೋದ ಸ್ವಾಮೀಜಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆಯ 2025 26ನೆಯ ವಾರ್ಷಿಕ ವಿಶೇಷ ಶಿಬಿರದ ಜನಪದ ಸಂಸ್ಕೃತಿ ಅಂದು ಇಂದು

ವಿಶೇಷ ಉಪನ್ಯಾಸ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಒಂದು ಸಮುದಾಯದ ಜನರ ರೀತಿ –ನೀತಿ, ಉಡುಗೆ– ತೊಡುಗೆ, ಭಾಷೆ, ಕಲೆ, ಸಾಹಿತ್ಯ,ಜೀವನ ವಿಧಾನವೆಲ್ಲವೂ ಜನಪದವಾಗಿದ್ದು, ಆ ಸಮುದಾಯದ ಎಲ್ಲ ಕಾರ್ಯ ವಿಧಾನಗಳು ಜನಪದ ಸಂಸ್ಕೃತಿಯಾಗಿರುತ್ತದೆ. ಜನಪದ ಸಂಸ್ಕೃತಿಗೆ ಭವ್ಯವಾದ ಇತಿಹಾಸವಿದ್ದು, ಇಂದಿನ ಸಮುದಾಯ ಜನಪದ ಸಂಸ್ಕೃತಿಯನ್ನು ಅರಿತುಕೊಳ್ಳುವುದು ಅತ್ಯಂತ ಅಗತ್ಯವಾಗಿದೆ ಎಂದು ಮುಂದುವರೆದ ಅವರು, ಗ್ರಾಮೀಣರಲ್ಲಿ ಜನಪದ ಸಂಸ್ಕೃತಿ ಇನ್ನೂ ಜೀವಂತವಾಗಿದ್ದು, ಪಟ್ಟಣ ನಗರಗಳಲ್ಲಿ ಆಧುನಿಕರಣದ ವ್ಯವಸ್ಥೆಯಿಂದಾಗಿ ಕನ್ನಡಿಗರ ಭವ್ಯವಾದ ಜನಪದ ಸಂಸ್ಕೃತಿ ಮರೆಯಾಗುತ್ತಿದೆ ಎಂದು ಕಂಬಾರರು ಕಳವಳ ವ್ಯಕ್ತಪಡಿಸಿದರು.

ಜನಪದ ಸಂಸ್ಕೃತಿ ಅಂದು ಇಂದು ವಿಷಯ ಕುರಿತು ವಿಶೇಷ ಉಪನ್ಯಾಸ ನೀಡಿದ ರಬಕವಿ– ಬನಹಟ್ಟಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ಉಪನ್ಯಾಸಕ ಡಾ. ಮಹಾದೇವ ಪೋತರಾಜ ಮಾತನಾಡಿ, ಗ್ರಾಮೀಣರಲ್ಲಿಯ ಭಯ– ಭಕ್ತಿ, ಆರಾಧನೆ ಆಚರಣೆಗಳು ಜನಪದ ಸಂಸ್ಕೃತಿಯ ವಿಧಾನವಾಗಿದ್ದು, ಶತ್ರುತ್ವದಲ್ಲಿ ಮಿತ್ರತ್ವವನ್ನು ಕಾಣುವ ಗುಣ ಕನ್ನಡ ಭವ್ಯ ಸಂಸ್ಕೃತಿಯಾಗಿದೆ. ಹಳ್ಳಿಗರ ಜಾತ್ರೆ, ಉತ್ಸವ, ಸಂಪ್ರದಾಯ, ಕಲೆಗಳಲ್ಲಿ ಜನಪದ ಸಂಸ್ಕೃತಿಯ ಅಡಕವಾಗಿದೆ ಎಂದು ಹೇಳಿದ ಅವರು, ಮೂಲ ಸಂಸ್ಕೃತಿಯಲ್ಲಿರುವ ಗುಣಗಳನ್ನು ಯುವ ಸಮುದಾಯ ಕಲಿತುಕೊಳ್ಳುವುದರ ಜೊತೆಗೆ, ಮುಂದಿನ ಸಮುದಾಯಕ್ಕೆ ನಮ್ಮ ಶ್ರೇಷ್ಠ ಜನಪದ ಸಂಸ್ಕೃತಿಯನ್ನು ತಿಳಿಸಿ ಕೊಡುವಂತಹ ಕೆಲಸವನ್ನು ಮಾಡಬೇಕೆಂದರು. ಜನಪದ ಸಂಸ್ಕೃತಿ ಅಂದು– ಇಂದು ಕಾರ್ಯಕ್ರಮವನ್ನು ಸಸಿಗೆ ನೀರು ಉಣಿಸುವ ಮೂಲಕ ಗಣ್ಯರು ಚಾಲನೆ ನೀಡಿದರು.

ಜನಪದ ಕಲಾವಿದರಾದ ವಿಠ್ಠಲ ಪೂಜೇರಿ ಮತ್ತು ಮಲ್ಲಿಕಾರ್ಜುನ ಕುಂಬಾರ ಸೇರಿದಂತೆ ಜನಪದ ಗೀತೆಗಳು ಹಾಡಿ ವಿದ್ಯಾರ್ಥಿಗಳನ್ನು ಮನರಂಜಿಸಿದರು. ಶಿಬಿರದ ವಿದ್ಯಾರ್ಥಿಗಳು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿದರು.

ಎನ್ಎನ್ಎಸ್ ಕಾರ್ಯಕ್ರಮ ಅಧಿಕಾರಿ ಪ್ರೊ. ರಾಜೇಂದ್ರ ಪ್ರಸಾದ ಆಸಂಗಿ, ಸಹಶಿಬಿರಾಧಿಕಾರಿಗಳಾದ ಹನುಮಂತ ಮರಡ್ಡಿ, ಪ್ರೊ. ಸರಸ್ವತಿ ರಬಕವಿ, ಶಿವರಾಜ ಕಾಂಬಳೆ, ಬೀರಪ್ಪ ಮಹಾಲಿಂಗಪುರ, ಮದರಖಂಡಿ, ಶಿಬಿರದ ನಾಯಕರದ ರವಿ ಕುಂದರಗಿ, ಕುಮಾರಿ ನೀಲವ್ವ ಬೂದಿಹಾಳ ಹಾಗೂ ಶಿಬಿರಾರ್ಥಿಗಳು ಭಾಗವಹಿಸಿದ್ದರು.

# ಪುಲಗಡಿಯಲ್ಲಿ ಶ್ರೀ ಚಂದ್ರವತಾಯಿ ಹಾಗೂ ಶ್ರೀ ಸದಾಶಿವ ಮುತ್ತ್ಯಾನ ಜಾತ್ರೆ ಸಂಪನ್ನ

**ಬೆಳಗಾವಿ ವಾರ್ತೆ ಮೂಡಲಗಿ:** ತಾಲೂಕಿನ ಪುಲಗಡ್ಡಿ ಗ್ರಾಮದಲ್ಲಿ ಶ್ರೀ ಶೆಟ್ಟಮ್ಮ ದೇವಿ, ಶ್ರೀ ಚಂದ್ರಮ್ಮ ತಾಯಿ ಹಾಗೂ ಶ್ರೀ ಗುರು ಚಕ್ರವರ್ತಿ ಸದಾಶಿವ ಶಿವಯೋಗಿಯವರ ಜಾತ್ರಾ ಮಹೋತ್ಸವ ಸಂಪನ್ನಗೊಂಡಿತು.

ಐದು ದಿನಗಳ ಪರ್ಯಂತರ ಪ್ರವಚನ, ಪುರಾಣ, ಗಣ್ಯಮಾನ್ಯ ಮಾನ್ಯರ ಸನ್ಮಾನ ಹಾಗೂ ಕೌಜಲಗಿಯ ಹಿರಿಯ ಸಾಹಿತಿ,ಸಂಶೋಧಕ ಪ್ರಕಾಶ ಕೋಟಿನತೋಟ ಅವರಿಗೆ ಸಾಹಿತ್ಯ ಸಿರಿ, ಚಿಕ್ಕೋಡಿ ತಾಲೂಕು ಜೋಡಕುರಳಿಯ ಅಜಿತ ಗುರುಗಳಿಗೆ ಜಾನಪದ ಸಿರಿ, ಬಾಗಲಕೋಟ ಜಿಲ್ಲೆ ಮುಧೋಳ ತಾಲೂಕಿನ ಮುಗಳಕೋಡದ ಅಶೋಕ ಮೇತ್ರಿ ಗೆ ಸಂಗೀತ ಸಿರಿ, ಗೋಕಾಕದ ಬಸವ ಜ್ಯೋತಿ ಐಟಿಐ ಕಾಲೇಜಿನ ಚೇರ್ಮನ್ ಅಶೋಕ್ ಲಗಮಪಗೋಳ ಅವರಿಗೆ ಶಿಕ್ಷಣ ಸಿರಿ, ಮತ್ತು ತಳಕಟನಾಳದ ಮಾಯಪ್ಪ ಮುತ್ಯಣ್ಣವರಗೆ ಜಾನಪದ ಸಿರಿ ಪ್ರಶಸ್ತಿಗಳನ್ನು ನೀಡಿ



ಗೌರವಿಸಲಾಯಿತು.

ಪ್ರತಿ ದಿನ ಬಳೋಬಾಳ, ನಾಗನೂರ, ಒಡೆಯರ ಹಟ್ಟಿ, ಕಲ್ಲೋಳ್ಳಿ ಇನ್ನು ಮುಂತಾದ ಗ್ರಾಮದ ಕಲಾವಿದರಿಂದ ಭಜನಾ ಕಾರ್ಯಕ್ರಮ ಜರುಗಿತು.

ಗ್ರಾಮದ ಗಣ್ಯಮಾನ್ಯರು ಹಾಗೂ ಜಾತ್ರಾ ಕಮಿಟಿಯ ಹಿರಿಯರ ಸಮ್ಮುಖದಲ್ಲಿ ಲಾಯನ್ಸ್ ಕ್ಲಬ್ ಗೋಕಾಕ ರಾಷ್ಟ್ರೀಯ ಅಂದತ್ವ ನಿವಾರಣ ಸಂಸ್ಥೆ ಇವರ ಸಹಕಾರ ಮತ್ತು ಡಾ ಬಿ ಆರ್ ಅಂಬೇಡ್ಕರ್ ಯುವಕ ಸಂಘ, ಮಹರ್ಷಿ ವಾಲ್ಮೀಕಿ ಯುವಕ ಸಂಘ, ಸ್ವಾಮಿ ವಿವೇಕಾನಂದ ಆಶ್ರಮದ ಸಹಕಾರದಲ್ಲಿ ಉಚಿತ ಕಣ್ಣಿನ ತಪಾಸನೆ ಹಾಗೂ ಚಸ್ಮಾ ವಿತರಣೆ ಜರುಗಿತು. ಭಕ್ತರ ಕುಂಭಮೇಳ ಹಾಗೂ ಆರತಿ ಮತ್ತು ಪಲ್ಲಕ್ಕಿ ಸೇವೆ ಗ್ರಾಮದಲ್ಲಿ ಸಂಚರಿಸಿ, ಶ್ರೀ ಗುರು ಚಕ್ರವರ್ತಿ ಸದಾಶಿವ ಅಪ್ಪಗಳವರ ನಾಲ್ಕನೇ ವರ್ಷದ ಮಹಾರಥೋತ್ಸವ ವಿಜ್ರಂಭಣೆಯಿಂದ ಜರುಗಿತು.

# ಹುಬ್ಬಳ್ಳಿ: 6 ಲಕ್ಷ ಲಂಚ ಸ್ವೀಕರಿಸುತ್ತಿದ್ದಾಗ ರೆಡ್ ಹ್ಯಾಂಡ್ ಆಗಿ ಲೋಕಾಯುಕ್ತ ಬಲೆಗೆ ಬಿದ್ದ ವಾಣಿಜ್ಯ ತೆರಿಗೆ ಉಪಆಯುಕ್ತ!

ಹುಬ್ಬಳ್ಳಿ: 6 ಲಕ್ಷ ರೂಪಾಯಿ ಲಂಚ ಸ್ವೀಕರಿಸುತ್ತಿದ್ದಾಗ ವಾಣಿಜ್ಯ ತೆರಿಗೆ ಉಪಆಯುಕ್ತ ಭರತ್ ಕುಮಾರ್ ಹೆಗ್ಡೆ ರೆಡ್ ಹ್ಯಾಂಡ್ ಆಗಿ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ. ಅಂಕೋಲಾ ಮೂಲದ ಉದ್ಯಮಿ ವಿಶ್ವಜಿತ್ ನಾಯಕ್ ಅವರಿಂದ ಹಣ ಪಡೆಯುತ್ತಿದ್ದಾಗ 48 ವರ್ಷದ ಹೆಗ್ಡೆ ಸಿಕ್ಕಿಬಿದ್ದಿದ್ದಾರೆ ಎಂದು ಬೆಂಗಳೂರು ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ಶಿವ ಪ್ರಕಾಶ್ ದೇವರಾಜ್ ತಿಳಿಸಿದ್ದಾರೆ.

ವಿಶ್ವಜಿತ್ ನಾಯಕ್ 2019ರಲ್ಲಿ ಎಂಟು ಟಿಪ್ಪರ್ ಟ್ರಕ್‌ಗಳನ್ನು ಖರೀದಿಸಿದ್ದರು. ಅಲ್ಲದೆ ಸುಮಾರು 60 ಲಕ್ಷ ರೂ.ಗಳ ಇನ್‌ಪುಟ್ ಟ್ಯಾಕ್ಸ್ ಕ್ರೆಡಿಟ್





ಗೆ ಅರ್ಹರಾಗಿದ್ದರು. ಅದರಲ್ಲಿ ಅವರು 34 ಲಕ್ಷ ರೂ.ಗಳನ್ನು ಕ್ಲೇಮ್ ಮಾಡಿದ್ದರು. ವಾಣಿಜ್ಯ ತೆರಿಗೆ ಇಲಾಖೆಯು ಅಕ್ರಮವಾಗಿ ಐಟಿಸಿ ಹಕ್ಕು ಸಾಧಿಸಲಾಗಿದೆ ಎಂದು ಆರೋಪಿಸಿ ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿತ್ತು. ಅಲ್ಲದೆ ನಾಯಕ್ ಅವರನ್ನು ನಾಲ್ಕು ಬಾರಿ ವಿಚಾರಣೆಗೂ ಕರೆಸಿತ್ತು.

ಅಂತಿಮವಾಗಿ ಪ್ರಕರಣವನ್ನು ಮುಕ್ತಾಯಗೊಳಿಸಲು 10 ಲಕ್ಷಕ್ಕೆ ಬೇಡಿಕೆ ಇಟ್ಟಿದ್ದರು. ಕೊನೆಗೆ 6 ಲಕ್ಷ ರೂಪಾಯಿಗೆ ಒಪ್ಪಿಕೊಂಡರು. ಇನ್ನು ಸರ್ಕಾರಿ ಅಧಿಕಾರಿ ಲಂಚಕ್ಕೆ ಬೇಡಿಕೆ ಇಟ್ಟಿದ್ದ ವಿಚಾರವನ್ನು ವಿಶ್ವಜಿತ್ ಲೋಕಾಯುಕ್ತಕ್ಕೆ ದೂರು ನೀಡಿದ್ದರು.

ಬೆಂಗಳೂರು ಲೋಕಾಯುಕ್ತ ಎಸ್ಪಿ ಶಿವಪ್ರಕಾಶ್ ದೇವರಾಜ್ ನೇತೃತ್ವದ ತಂಡ ಕಾರ್ಯಾಚರಣೆ ನಡೆಸಿ ಸರ್ಕಾರಿ ಅಧಿಕಾರಿಯನ್ನು ಬಂಧಿಸಲಾಗಿದೆ ಎಂದು ಲೋಕಾಯುಕ್ತ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪ್ರಕರಣ ದಾಖಲಿಸಿಕೊಂಡಿದ್ದು ತನಿಖೆ ಪ್ರಗತಿಯಲ್ಲಿದೆ ಎಂದರು.

# ಶಾಲಾ ಮಟ್ಟದಲ್ಲಿ ವಿಜ್ಞಾನ ಕ್ರಾಂತಿ: ಬೆಂಗಳೂರು ಶೈಕ್ಷಣಿಕ ಸಂಶೋಧನಾ ಸಂಸ್ಥೆ ಕಾರ್ಯಕ್ಕೆ ಪ್ರಧಾನಿ ಮೋದಿ ಮೆಚ್ಚುಗೆ

ಬೆಂಗಳೂರು: ವಿಜ್ಞಾನ ಶಿಕ್ಷಣದಲ್ಲಿ ಬೆಂಗಳೂರಿನ "ಪ್ರಯೋಗ್ ಇನ್‌ಸ್ಟಿಟ್ಯೂಟ್ ಆಫ್ ಎಜುಕೇಶನ್ ರಿಸರ್ಚ್" ಸಂಸ್ಥೆಯ ಅನ್ವೇಷಣಾ ಯೋಜನೆಗೆ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಭಾನುವಾರ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ತಮ್ಮ ಮಾಸಿಕ ರೇಡಿಯೋ ಕಾರ್ಯಕ್ರಮ 'ಮನ್ ಕಿ ಬಾತ್'ನ 132ನೇ ಸಂಚಿಕೆಯಲ್ಲಿಂದು ಮಾತನಾಡಿದ ಅವರು, ಶಾಲಾ ಮಟ್ಟದಲ್ಲೇ ಸಂಶೋಧನೆ ಆಧಾರಿತ ಕಲಿಕೆಯನ್ನು ಉತ್ತೇಜಿಸುವ ಈ ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ವಿಜ್ಞಾನಾಸಕ್ತಿ ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ಹೇಳಿದರು.

'ಅನ್ವೇಷಣಾ' ಯೋಜನೆಯ ಮೂಲಕ 9ರಿಂದ 12ನೇ ತರಗತಿಯ ವಿದ್ಯಾರ್ಥಿಗಳಿಗೆ ರಸಾಯನಶಾಸ್ತ್ರ, ಭೂ ವಿಜ್ಞಾನ ಹಾಗೂ ಆರೋಗ್ಯ ವಿಜ್ಞಾನ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಂಶೋಧನಾ ಅನುಭವ ಪಡೆಯುವ ಅವಕಾಶ ಕಲ್ಪಿಸಲಾಗುತ್ತಿದೆ. ಈ ಯೋಜನೆಯಿಂದ ವಿದ್ಯಾರ್ಥಿಗಳಿಗೆ ತಮ್ಮ ಸಂಶೋಧನೆಗಳನ್ನು ಪ್ರಕಟಿಸುವ ವೇದಿಕೆಯೂ ಲಭ್ಯವಾಗುತ್ತಿದೆ ಎಂದು ತಿಳಿಸಿದರು.

ಇದೇ ವೇಳೆ ವಿದ್ಯಾರ್ಥಿಗಳಲ್ಲಿ ವಿಜ್ಞಾನ ವಿಷಯದ ಭಯದ ಬಗ್ಗೆ ಮಾತನಾಡಿದ ಪ್ರಧಾನಿ, "ಕೆಲವರು ವಿಜ್ಞಾನ ಕಲಿಯಲು ಇಷ್ಟಪಟ್ಟರೂ ಭಯದಿಂದ ಹಿಂದೆ ಸರಿಯುತ್ತಾರೆ. ಇಂತಹ ಯೋಜನೆಗಳು ಅವರಲ್ಲಿ ಆತ್ಮವಿಶ್ವಾಸ ಹೆಚ್ಚಿಸಿ, ಪ್ರಾಯೋಗಿಕವಾಗಿ ಕಲಿಯಲು ಪ್ರೇರೇಪಿಸುತ್ತವೆ" ಎಂದು ಹೇಳಿದರು. ಕೈಹಿಡಿದು ಕಲಿಸುವ ವಿಧಾನದಿಂದ ವಿದ್ಯಾರ್ಥಿಗಳಲ್ಲಿ ಕುತೂಹಲ ಮತ್ತು ಆಸಕ್ತಿ ಸಹಜವಾಗಿ ಬೆಳೆಯುತ್ತದೆ ಎಂಬುದನ್ನೂ ಅವರು ಒತ್ತಿ ಹೇಳಿದರು. 2022ರಲ್ಲಿ ಆರಂಭವಾದ ಈ ಅನ್ವೇಷಣಾ ಯೋಜನೆ, ವಿದ್ಯಾರ್ಥಿಗಳಿಗೆ ಮಾರ್ಗದರ್ಶಕರ ನೆರವಿನಿಂದ ನೇರ ಸಂಶೋಧನಾ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುವ ಅವಕಾಶ ನೀಡುತ್ತಿದೆ. ಇದೂವರೆಗೆ ಹಲವಾರು ವಿದ್ಯಾರ್ಥಿಗಳ ಸಂಶೋಧನಾ ಪ್ರಬಂಧಗಳು ಅಂತಾರಾಷ್ಟ್ರೀಯ ಜರ್ನಲ್‌ಗಳಲ್ಲಿ ಪ್ರಕಟವಾಗಿರುವುದು ಗಮನಾರ್ಹ ಸಾಧನೆಯಾಗಿದೆ. ಕರ್ನಾಟಕದ ಗ್ರಾಮೀಣ ಭಾಗದ ನಾಲ್ವರು ವಿದ್ಯಾರ್ಥಿಗಳು ಈ ಯೋಜನೆಯಡಿ ಸಸ್ಯ ಆಧಾರಿತ ವಿಧಾನದಿಂದ ತಾಮ್ರ ಆಕ್ಸೈಡ್ ನ್ಯಾನೋ ಕಣಗಳ ತಯಾರಿಕೆ ಕುರಿತು ಸಂಶೋಧನೆ ನಡೆಸಿದ್ದು, ಅವರ ಕೆಲಸ ಅಂತಾರಾಷ್ಟ್ರೀಯ ಜರ್ನಲ್‌ನಲ್ಲಿ ಪ್ರಕಟಗೊಂಡಿದೆ. ಈ ಸಾಧನೆಗಾಗಿ ಅವರಿಗೆ ರಾಜ್ಯ ಸರ್ಕಾರದಿಂದ ಸನ್ಮಾನವೂ ದೊರಕಿದೆ.

# 'ಮಸೀದಿ ಕೆಡವಿದ್ರೆ ದೇಗುಲ ಸಿಕ್ಕಂತೆಯೇ ದೇಗುಲ ಕೆಡವಿದ್ರೆ ಸ್ತೂಪ ಸಿಗುತ್ತದೆ': ವಿವಾದದ ಕಿಡಿ ಹೊತ್ತಿಸಿದ ಸಚಿವ ಪ್ರಿಯಾಂಕ್ ಖರ್ಗೆ

ಬೆಂಗಳೂರು: ಮಸೀದಿ ಕೆಡವಿದರೆ ಹೇಗೆ ದೇವಾಲಯಗಳು ಸಿಗುತ್ತದೆಯೇ ಅದೇ ರೀತಿ ದೇವಾಲಯಗಳನ್ನು ಕೆಡವಿದರೆ ಸ್ತೂಪ ಸಿಗುತ್ತದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದು, ಈ ಹೇಳಿಗೆ ವಿವಾದವನ್ನು ಸೃಷ್ಟಿಸಿದೆ.

ಬೆಂಗಳೂರಿನಲ್ಲಿ ನಡೆದ ನವೀನ್ ಸೂರಿಂಜೆಯವರ 'ಕರಾವಳಿ ಚರಿತ್ರೆಯಲ್ಲಿ ಹೈದರ್ ಅಲಿ ಮತ್ತು ಟಿಪ್ಪು ಸುಲ್ತಾನ್' ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಪ್ರಿಯಾಂಕ್ ಖರ್ಗೆಯವರು ಮಾತನಾಡಿದರು.


ಇತಿಹಾಸವನ್ನು ಆಳವಾಗಿ ಹುಡುಕಿದರೆ, ನೀವು ಸಿಕ್ಕಿಹಾಕಿಕೊಳ್ಳುತ್ತೀರಿ. ನೀವು ಯಾವುದೇ ಮಸೀದಿಯನ್ನು ಕೆಡವಿದರೆ ನಿಮಗೆ ದೇವಾಲಯ ಸಿಗಬಹುದು, ಅದೇ ರೀತಿ ದೇವಾಲಯವನ್ನು ಕೆಡವಿದರೂ ನಿಮಗೆ ಸ್ತೂಪ ಸಿಗುತ್ತದೆ. ಸ್ತೂಪವನ್ನು ಕೆಡವಿದರೆ, ಏನು ಸಿಗುತ್ತದೆ ಎಂಬುದು ನನಗೆ ಗೊತ್ತಿಲ್ಲ.... 3,500 ವರ್ಷಗಳ ಇತಿಹಾಸ ಆಧರಿಸಿ ನಾನು ಹೇಳಿಕೆ ನೀಡುತ್ತಿದ್ದೇನೆಂದು ಹೇಳಿದರು.

ವೇದ ಕಾಲದ ಬ್ರಾಹ್ಮಣ್ಯದ ಸಂಪ್ರದಾಯವು ಜಾತಿ ವ್ಯವಸ್ಥೆ ಮತ್ತು ವೇದಗಳ ಪ್ರಾಬಲ್ಯವನ್ನು ನಂಬದ ಜೈನ ಮತ್ತು ಬೌದ್ಧ ಧರ್ಮದಂತಹ ಶ್ರಮಣ ಸಂಪ್ರದಾಯಗಳೊಂದಿಗೆ ದೀರ್ಘಕಾಲದ ಹೋರಾಟ ನಡೆಸಿದೆ ಎಂಬ ಐತಿಹಾಸಿಕ ಹಿನ್ನೆಲೆಯನ್ನು ಅವರು ಈ ಮೂಲಕ ಉಲ್ಲೇಖಿಸಿದರು.

ಇದೇ ವೇಳೆ ಟಿಪ್ಪು ಸುಲ್ತಾನ್ ಅವರನ್ನು ಸ್ವಾತಂತ್ರ್ಯ ಹೋರಾಟಗಾರ ಎಂದು ಶ್ಲಾಘಿಸಿದ ಅವರು, ಬ್ರಿಟಿಷರ ವಿರುದ್ಧ ಟಿಪ್ಪು ನಡೆಸಿದ ಹೋರಾಟವನ್ನು ಆರೆಸ್ಸೆಸ್ (ಖಖಖ) ನಿಲುವಿಗೆ ಹೋಲಿಸಿದರು.

ಬ್ರಿಟಿಷರ ವಿರುದ್ಧ ಆರೆಸ್ಸೆಸ್ ಒಂದು ಸಣ್ಣ ಧ್ವನಿಯನ್ನೂ ಎತ್ತಿರಲಿಲ್ಲ ಎಂದು ಟೀಕಿಸಿದ ಅವರು, 18ನೇ ಶತಮಾನದ ರಾಜ ಟಿಪ್ಪು ಸುಲ್ತಾನ್ ಬ್ರಿಟಿಷರ ವಿರುದ್ಧ ನಡೆಸಿದ ನಾಲ್ಕು ಆಂಗ್ಲೋ–ಮೈಸೂರು ಯುದ್ಧಗಳನ್ನು ಮತ್ತು ಅವರ ವಸಾಹತುಶಾಹಿ ವಿರೋಧಿ ನಿಲುವನ್ನು ಸ್ಮರಿಸಿದರು.

ಇದೇ ವೇಳೆ ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಅವರ ಹೆಸರನ್ನು ಉಲ್ಲೇಖಿಸದೆ ಪರೋಕ್ಷವಾಗಿ



ವಾಗ್ದಾಳಿ ನಡೆಸಿದ ಅವರು, 'ಟಿಪ್ಪು ಸುಲ್ತಾನ್ ಸ್ವಾತಂತ್ರ್ಯ ಹೋರಾಟಗಾರರಲ್ಲ ಎಂದು ಬಿಜೆಪಿ ಮತ್ತು ಆರ್‌ಎಸ್‌ಎಸ್‌ನವರು ವಾದ ಮಾಡುತ್ತಾರೆ. ಆದರೆ, ಟಿಪ್ಪು ಬ್ರಿಟಿಷರ ವಿರುದ್ಧ ನಾಲ್ಕು ಆಂಗ್ಲೋ–ಮೈಸೂರು ಯುದ್ಧಗಳನ್ನು ಮಾಡಿದ್ದು ನಿಜವೊ, ಸುಳ್ಳೊ? ಬ್ರಿಟಿಷರ ವಿರುದ್ಧ ಹೋರಾಡಿದವರು ಸ್ವಾತಂತ್ರ್ಯ ಹೋರಾಟಗಾರರು ಅಲ್ಲವೇ? ಎಂದು ಪ್ರಶ್ನಿಸಿದರು.

'ಟಿಪ್ಪುಸುಲ್ತಾನ್ ತೋಟಗಾರಿಕೆಯ ಪಿತಾಮಹ ಆಗಿದ್ದಾರೆ. ಈ ಬಗ್ಗೆ ದಾಖಲೆಗಳಿವೆ. ಬೆಂಗಳೂರಿನ ಲಾಲ್‌ಬಾಗ್ ಅನ್ನು ಹೈದರ್ ಅಲಿ ಮತ್ತು ಟಿಪ್ಪು ಸುಲ್ತಾನ್ ನಿರ್ಮಿಸಿದ್ದಾರೆ. ಆದರೆ, ಆ ಭಾಗದ ಸಂಸದರು ಟಿಪ್ಪು ವಿರೋಧಿಯಾಗಿದ್ದಾರೆ. ಹಾಗಾದರೆ ಲಾಲ್‌ಬಾಗ್ ಅನ್ನು ಸುಡುತ್ತೀರಾ' ಎಂದು ಪ್ರಶ್ನಿಸಿದರು.

ಇದೇ ವೇಳೆ ತಾನು ಇಂಗ್ಲೆಂಡ್‌ಗೆ ಭೇಟಿ ನೀಡಿದಾಗ ಬ್ರಿಟಿಷ್ ಇತಿಹಾಸ ತಜ್ಞರೊಬ್ಬರು, ಬ್ರಿಟಿಷ್ ಇತಿಹಾಸದ ಪುಸ್ತಕಗಳಲ್ಲಿ ಭಾರತದ ಕೆಲವೇ ಕೆಲವು ಸ್ವಾತಂತ್ರ್ಯ ಹೋರಾಟಗಾರರ ಹೆಸರಿದ್ದು, ಅದರಲ್ಲಿ ಟಿಪ್ಪು ಹೆಸರು ಪ್ರಮುಖವಾಗಿದೆ ಎಂದು ಹೇಳಿದ್ದನ್ನು ಅವರು ಸ್ಮರಿಸಿದರು.

# ವಾಣಿಜ್ಯ LPG ಸಿಲಿಂಡರ್ ಪೂರೈಕೆ ಶೇ 68ರಷ್ಟು ಹೆಚ್ಚಳ: ಆದ್ಯತೆಗನುಗುಣವಾಗಿ ಹೆಚ್ಚುವರಿ ಸಿಲಿಂಡರ್ ಹಂಚಿಕೆ..!

ಬೆಂಗಳೂರು: ರಾಜ್ಯದಲ್ಲಿ ಎಲ್‌ಪಿಜಿ ಕೊರತೆ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಕರ್ನಾಟಕಕ್ಕೆ ನೀಡುತ್ತಿದ್ದ ಎಲ್‌ಪಿಜಿ ಹಂಚಿಕೆಯನ್ನು ಶೇ.68ಕ್ಕೆ ಹೆಚ್ಚಿಸಿದ್ದು, ಇದೀಗ ಅಗತ್ಯ ಹಾಗೂ ಆದ್ಯತೆಗೆ ತಕ್ಕಂತೆ ವಿತರಣೆಯನ್ನು ಆರಂಭಿಸಲಾಗಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಹೆಚ್.ಮುನಿಯಪ್ಪ ಅವರು ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭಾನುವಾರದಿಂದ ಪ್ರತಿದಿನ 29,463 ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳನ್ನು ಪೂರೈಸಲಾಗುತ್ತಿದ್ದು, ಹೋಟೆಲ್ ಮತ್ತು ಉಪಹಾರ ಗೃಹಗಳಿಗೆ ದಿನಕ್ಕೆ 17,500 ಸಿಲಿಂಡರ್‌ಗಳನ್ನು ವಿತರಿಸಲಾಗುತ್ತಿದೆ. ಇದರಿಂದ ಅವರ ಸಾಮಾನ್ಯ ಬೇಡಿಕೆಯ 60 ಶೇಕಡದಷ್ಟು ಪೂರೈಕೆ ಸಾಧ್ಯವಾಗಿದೆ ಎಂದು ಹೇಳಿದರು.

ಆದ್ಯತೆ ಕ್ರಮದಲ್ಲಿ ವಿತರಣೆಯ ಭಾಗವಾಗಿ ಶಿಕ್ಷಣ ಸಂಸ್ಥೆಗಳು ಮತ್ತು ವಸತಿಗೃಹಗಳಿಗೆ 4,200 ಸಿಲಿಂಡರ್‌ಗಳು, ವಿಮಾನ ನಿಲ್ದಾಣ, ರೈಲು ನಿಲ್ದಾಣ ಹಾಗೂ ಬಸ್ ನಿಲ್ದಾಣಗಳಿಗೆ 1,200 ಸಿಲಿಂಡರ್‌ಗಳು, ಬೀಜ ಸಂಸ್ಕರಣಾ ಘಟಕಗಳು ಹಾಗೂ ಕೃಷಿ ಸಂಬಂಧಿತ ಕ್ಷೇತ್ರಗಳಿಗೆ 6,000 ಸಿಲಿಂಡರ್‌ಗಳನ್ನು ಪೂರೈಸಲಾಗುತ್ತಿದೆ. ಅಗತ್ಯವಿರುವವರಿಗೆ 563 ಸಿಲಿಂಡರ್‌ಗಳನ್ನು ವಿಶೇಷವಾಗಿ



ನೀಡಲಾಗುತ್ತಿದೆ ಎಂದು ತಿಳಿಸಿದರು.

ಇದೇ ವೇಳೆ ಸಾಮಾನ್ಯ ಜನರಿಗೆ ಪರಿಸ್ಥಿತಿ ಸುಧಾರಿಸುವವರೆಗೆ ಎಲ್‌ಪಿಜಿ ಬಳಕೆಯನ್ನು ಮಿತವಾಗಿ ಬಳಸುವಂತೆ ಸಚಿವರು ಮನವಿ ಮಾಡಿದ್ದು, ಸಾಧ್ಯವಾದಲ್ಲಿ ವಿದ್ಯುತ್ ಸ್ಟೌವ್ ಹಾಗೂ ಮರದ ಇಂಧನ ಬಳಕೆ ಮಾಡುವಂತೆ ಸಲಹೆ ನೀಡಿದರು.

ಬಳಿಕ ಆಟೋ ಎಲ್‌ಪಿಜಿ ಪೂರೈಕೆಯಲ್ಲಿ ಯಾವುದೇ ಕೊರತೆ ಇಲ್ಲ ಎಂದು ತಿಳಿಸಿದ ಸಚಿವರು, ರಾಜ್ಯದಾದ್ಯಂತ 72 ಕೇಂದ್ರಗಳಲ್ಲಿ, ಮುಖ್ಯವಾಗಿ ಬೆಂಗಳೂರಿನಲ್ಲಿ 31 ಕೇಂದ್ರಗಳಲ್ಲಿ ಆಟೋ ಎಲ್‌ಪಿಜಿ ಲಭ್ಯವಿದೆ. ಪ್ರತಿ ಲೀಟರ್‌ಗೆ 77.74 ರೂ. ದರದಲ್ಲಿ ಪೂರೈಕೆ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಇತ್ತೀಚಿನ ದಿನಗಳಲ್ಲಿ ಆಟೋ ಎಲ್‌ಪಿಜಿ ಪೂರೈಕೆ ಹೆಚ್ಚಳ ಕಂಡಿದ್ದು, ದಿನಕ್ಕೆ ಸರಾಸರಿ 64.9 ಟನ್ ವಿತರಣೆ ಆಗುತ್ತಿದೆ. ಮಧ್ಯಪ್ರಾಚ್ಯ ಸಂಘರ್ಷಕ್ಕೂ ಮುನ್ನ ಇದು 57.6 ಟನ್ ಮಾತ್ರವಾಗಿತ್ತು ಎಂದು ಸಚಿವರು ಮಾಹಿತಿ ನೀಡಿದರು.

ಅಕ್ರಮ ಸಂಗ್ರಹಣೆ ಮತ್ತು ಕಾಳಸಂತೆ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುತ್ತಿದ್ದು, ಇದುವರೆಗೆ 27 ಎಫ್‌ಐಆರ್‌ಗಳು ಮತ್ತು 1,169 ಪ್ರಕರಣಗಳು ದಾಖಲಾಗಿವೆ. ಒಟ್ಟು 1,603 ಸಿಲಿಂಡರ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಹೇಳಿದರು.

ಇದೇ ವೇಳೆ ಗ್ಯಾಸ್ ಸಿಲಿಂಡರ್‌ಗಳನ್ನು ಹೆಚ್ಚುವರಿ ದರಕ್ಕೆ ಮಾರಾಟ ಮಾಡುವ ವಿತರಕರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ ಸಚಿವರು, ಇಂತಹವರ ಪರವಾನಗಿ ರದ್ದುಪಡಿಸಿ ಕಾನೂನು ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದರು.

# “ನಮ್ಮ ಆರೋಗ್ಯ ನಮ್ಮ ಅಡುಗೆ ಮನೆಯಲ್ಲಿ ಇದೆ”: ಮಾಣಿಕ್ಯ ಚಿಲ್ಲೂರ




**ಬೆಳಗಾವಿ ವಾರ್ತೆ ಬೆಳಗಾವಿ:** ಸ್ನೇಹ,ಪ್ರೀತಿ ನಿರ್ಮೊಂದಿಗೆ ಕೃಷಿ ಬಳಗ ಬೆಳಗಾವಿಯ ಮಾಸಿಕ ಸಭೆ ಉಗರಖೋಡ ಗ್ರಾಮದ ಕಾಮಧೇನು ಕಲ್ಪವೃಕ್ಷ ಫಾರ್ಮ್‌ನಲ್ಲಿ ಯಶಸ್ವಿಯಾಗಿ ನಡೆಯಿತು. ಸಮಾನ ಮನಸ್ಕ ರೈತರನ್ನು ಒಂದೇ ವೇದಿಕೆಯಲ್ಲಿ ಸೇರಿಸಿ ಸಾವಯವ ಕೃಷಿ, ಬೆಳೆ ಮೌಲ್ಯವರ್ಧನೆ ಮತ್ತು ಆರೋಗ್ಯಕರ ಜೀವನಶೈಲಿಯ ಕುರಿತು ಚರ್ಚೆಗಳು ನಡೆದವು.

ಕಾರ್ಯಕ್ರಮದಲ್ಲಿ ಸಾಧಕ ಯುವ ರೈತ ವೀರಣ್ಣ ಕುಂಬಾರ ಹಾಗೂ ಆಯೋಜಕರಾದ ಎಸ್.ಪಿ. ಹಿರೇಮಠ ಅವರನ್ನು ಸತ್ಕರಿಸಲಾಯಿತು. ವರದಶ್ರೀ ಫೌಂಡೇಶನ್‌ನ ಮಲ್ಲಿಕಾರ್ಜುನ ರಡ್ಡೇರ್ ಅವರು ಮಾತನಾಡಿ, ಇಂದಿನ ಕಾಲದಲ್ಲಿ ನಮ್ಮ ಆರೋಗ್ಯ ನಮ್ಮ ಕೈಯಲ್ಲಿದ್ದು, ಸಾವಯವ ಕೃಷಿಯ ಮಹತ್ವವನ್ನು ರೈತರಿಗೆ ವಿವರಿಸಿದರು.

ಪ್ರಜಾಪಿತ ಬ್ರಹ್ಮಕುಮಾರಿ ಸಂಸ್ಥೆಯ ಶೇಖರಣ್ಣ ಜಮಖಂಡಿ ಅವರು ಮೌಲ್ಯಯುತ ಜೀವನಕ್ಕೆ ಆರೋಗ್ಯದ ಅಗತ್ಯತೆಯ ಬಗ್ಗೆ ಮಾತನಾಡಿದರು. ಇನ್ನೋರ್ವ ಅತಿಥಿ ಮಾಣಿಕ್ಯ ಚಿಲ್ಲೂರ ಅವರು “ನಮ್ಮ ಆರೋಗ್ಯ ನಮ್ಮ ಅಡುಗೆ ಮನೆಯಲ್ಲಿ ಇದೆ” ಎಂಬ ಸಂದೇಶ ನೀಡಿ, ಮಹಿಳೆಯರ ಪಾತ್ರ ಮತ್ತು ಜಾಗೃತಿ ಕೃಷಿಯ ಮಹತ್ವವನ್ನು ಒತ್ತಿ ಹೇಳಿದರು.

ಕಾರ್ಯಕ್ರಮಕ್ಕೆ ಮಡಿವಾಳೇಶ್ವರ ಮಠ, ದೇವರಶೀಗಿಹಳ್ಳಿ ಅವರ ವೀರೇಶ್ವರ ಸ್ವಾಮೀಜಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಸಂಚಾಲಕರಾದ ರೂಪೇಶ್ ಕಾಮತ್ ಹಾಗೂ ಅವರ ತಂಡದ ಸಮರ್ಪಕ ಆಯೋಜನೆಯಿಂದ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು.

# ನೀರು ಪೋಲಾಗದಂತೆ, ನೀರನ್ನು ಸರಿಯಾಗಿ ಸದ್ಬಳಕೆ ಮಾಡಿಕೊಳ್ಳಬೇಕೆಂದು ರೈತರಿಗೆ, ಸಾರ್ವಜನಿಕರಿಗೆ ಸಚಿವ ಸತೀಶ ಜಾರಕಿಹೊಳಿ ಮನವಿ



**ಬೆಳಗಾವಿ ವಾರ್ತೆ ಬೆಳಗಾವಿ:** ಹಿಡಕಲ್ ಜಲಾಶಯದಿಂದ ಘಟಪ್ರಭೆ ನದಿಗೆ ನೀರು ಹರಿಸಲಾಗುತ್ತಿದ್ದು, ನೀರು ಪೋಲಾಗದಂತೆ, ನೀರನ್ನು ಸರಿಯಾಗಿ ಸದ್ಬಳಕೆ ಮಾಡಿಕೊಳ್ಳಬೇ ಕೆಂದು ರೈತರಿಗೆ, ಸಾರ್ವಜನಿಕರಿಗೆ ಲೋಕೋಪಯೋಗಿ ಇಲಾಖೆ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ವಿಷಯ ತಿಳಿಸಿದ ಸಚಿವರು, ಪ್ರತಿ ವರ್ಷದಂತೆ ಈ ಬಾರಿಯು ಹಿಡಕಲ್ ಡ್ಯಾಂ ನಿಂದ ಘಟಪ್ರಭೆ ನದಿಗೆ ಕುಡಿಯಲಿಕ್ಕೆ ನೀರು ಬಿಡುಗಡೆ ಮಾಡುವ ನಿರ್ಧಾರವನ್ನು ಮಾಡಲಾಗಿದೆ. ಇದೇ 30ರಂದು ಘಟಪ್ರಭೆ ನದಿಗೆ ನೀರು ಹರಿಸಲಾಗುತ್ತಿದ್ದು, ಈ ಕ್ರಮಕ್ಕೆ ಚುನಾವಣಾ ಆಯೋಗದಿಂದ ಅನುಮತಿ ಪಡೆಯಲಾಗಿದೆ ಎಂದು ತಿಳಿಸಿದ್ದಾರೆ.

ಏ.7ರಂದು ಘಟಪ್ರಭೆ ಬಲದಂಡೆ, ಎಡದಂಡೆ ಕಾಲುವೆಗೆ ನೀರು ಹರಿಸಲು ನಿರ್ಧಾರ ಮಾಡಲಾಗಿದ್ದು, ನೀರು ಪೋಲಾಗದಂತೆ, ಸರಿಯಾಗಿ ಸದ್ಬಳಕೆ ಮಾಡಿಕೊಳ್ಳಬೇಕೆಂದು ರೈತರಿಗೆ ಹಾಗೂ ಸಾರ್ವಜನಿಕರಿಗೆ ಸಚಿವರು ಮನವಿ ಮಾಡಿದ್ದಾರೆ.

**ರೈತರ ಅನುಕೂಲಗೋಸ್ಕರ ನೀರು ಬಿಡುಗಡೆ:** ಈ ನೀರು ಬಿಡುಗಡೆ ಮಾಡಲು ಸುಮಾರು 6 ತಿಂಗಳ ಕಾಲ ನೀರು ಸಂಗ್ರಹ ಮಾಡಬೇಕಾಗುತ್ತದೆ. ಆ ನಿಟ್ಟಿನಲ್ಲಿ ಸುಮಾರು ವರ್ಷಗಳಿಂದ ರೈತರಗೆ ಅನುಕೂಲವಾಗಲೆಂದು ನೀರು ಹರಿಸಲಾಗುತ್ತಿದೆ. ಈ ನೀರನ್ನು ಜಿಲ್ಲೆಯ ರೈತರು ಹಾಗೂ ಸಾರ್ವಜನಿಕರು ಪೋಲಾಗದಂತೆ ಸದ್ಬಳಕೆ ಮಾಡಿಕೊಳ್ಳಬೇಕೆಂದು ಸಚಿವ ಸತೀಶ್ ಜಾರಕಿಹೊಳಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೆಮ್ಮದಿಯ ಜೀವನಕ್ಕೆ ಆಧ್ಯಾತ್ಮ ಸರಳ ಮಾರ್ಗವಾಗಿದೆ: ವಿಜಯಾಂಬಿಕಾ ಮಾತಾಜಿ

**ಬೆಳಗಾವಿ ವಾರ್ತೆ ಗೋಕಾಕ:** ನೆಮ್ಮದಿಯ ಜೀವನಕ್ಕೆ ಆಧ್ಯಾತ್ಮ ಸರಳ ಮಾರ್ಗವಾಗಿದೆ ಎಂದು ಬೆಂಗಳೂರಿನ ಬಸವ ಧರ್ಮ ಪೀಠದ ವಿಜಯಾಂಬಿಕಾ ಮಾತಾಜಿ ಹೇಳಿದರು.

ಅವರು, ರವಿವಾರದಂದು ನಗರದ ಬಸವ ಮಂದಿರದಲ್ಲಿ ಕರ್ನಾಟಕ ರಾಜ್ಯ ಬಣಜಿಗ ಸಮಾಜದ ಕ್ಷೇಮಾಭಿವೃದ್ಧಿ ಸಂಘದ ಮಹಿಳಾ ಘಟಕ ಗೋಕಾಕ ಇವರು ಹಮ್ಮಿಕೊಂಡ ಬಸವ ಧರ್ಮ ಸಂಸ್ಕಾರ ಶಿಬಿರದ ನೇತ್ರತ್ವ ವಹಿಸಿ ಮಾತನಾಡುತ್ತ 12ನೇ ಶತಮಾನದಲ್ಲಿ ಬಸವಣ್ಣನವರು ನೀಡಿದ ಇಷ್ಟಲಿಂಗ ಪೂಜೆಯನ್ನು ಪ್ರತಿ ದಿನ ಪೂಜಿಸಿ ಸದಾ ನೆಮ್ಮದಿ ಹಾಗೂ ಆನಂದದಿಂದ ಇರುವಂತೆ ತಿಳಿಸಿದರು.



ಶಿಬಿರವನ್ನು ರತ್ನಾ ಉದೋಶಿಯವರು ಉದ್ಘಾಟಿಸಿದರು. ಅಧ್ಯಕ್ಷತೆಯನ್ನು ಬಣಜಿಗ ಸಮಾಜದ ಮಹಿಳಾ ಘಟಕದ ಅಧ್ಯಕ್ಷೆ ಮಹಾದೇವಿ ಉಪ್ಪಿನ ವಹಿಸಿದ್ದರು.

ಈ ಸಂದರ್ಭದಲ್ಲಿ ರೇಖಾ ಕಲ್ಯಾಣಶೆಟ್ಟಿ, ಶೀಲಾ ಮಹಾಂತಶೆಟ್ಟಿ, ಹರ್ಷಿತಾ ಸವಣೂರ, ದೀಪಾ ಬೆಲ್ಲದ, ಶೈಲಾ ಬಿದರಿ ಇದ್ದರು.

# ಯಾರ ಕೈ-ಕಾಲು ಹಿಡಿಯಲ್ಲ, ಜೆಸಿಬಿ ಪಕ್ಷಕ್ಕೆ ಇನ್ನೂ ಸಮಯ ಇದೆ: ಯತ್ನಾಳ



**ಬೆಳಗಾವಿ ವಾರ್ತೆ ಚಿಕ್ಕೋಡಿ:** ಬಿಜೆಪಿ ಸೇರ್ಪಡೆಗೆ ನಾನು ಯಾರನ್ನೂ ಭೇಟಿಯಾಗಲ್ಲ. ಯಾರ ಕೈಕಾಲು ಹಿಡಿಯಲ್ಲ. ಅವಶ್ಯಕತೆ ಬಿದ್ದಾಗ ಅವರು ಕರೆಯುತ್ತಾರೆ. ಇಲ್ಲವಾದ್ರೇ ಪಕ್ಷ ಕಟ್ಟೋದು ಅಂತಾ ಹೇಳಿದಿನಿ, ಜೆಸಿಬಿ ಪಕ್ಷಕ್ಕೆ ಇನ್ನೂ ಸಮಯ ಇದೆ, ಗಡಿ ಬಿಡಿ ಮಾಡಬೇಡಿ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ ತಿಳಿಸಿದರು.

ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಸರ್ಕಾರ ಪಾಕಿಸ್ತಾನದೊಳಗಿನ ಒಂದು ಸರ್ಕಾರ ಇದ್ದಂಗಿದೆ. ಬಜೆಟ್‌ನಲ್ಲಿ ಎಲ್ಲಾ ಅವರಿಗೆ ಕೊಟ್ಟಿದ್ದಾರೆ. ಅವರ ಹೆಣ್ಣು ಮಕ್ಕಳಿಗೆ ಕರಾಟೆ ಕಲಿಸುತ್ತಾರಂತೆ, ಪಿಎಸ್‌ಐ ಟ್ರೈನಿಂಗ್, ಸಿಬಿಎಸ್ಸಿ ಶಾಲೆ ಮಾಡೋದು, ಉರ್ದು ಶಾಲೆಗೆ ಪ್ರೋತ್ಸಾಹ ಕೊಡೊದು. ಇದು ಒಬ್ಬ ರಾಜ್ಯದ ಮುಖ್ಯಮಂತ್ರಿ ಮಾಡುವ ಬಜೆಟ್? ಎಂದು ಪ್ರಶ್ನೆ ಮಾಡಿದರು.

ವಿಜಯೇಂದ್ರ ಎಂಬ ಧೀಮಂತ ನಾಯಕ, ಅವರ ತಂದೆ ರೈತ ಪರ ಹೋರಾಟಗಾರರು, ಜೈಲಿಗೆ ಹೋಗಿ ಬಂದಿದ್ದಾರೆ. ಈ ಸರ್ಕಾರ ಹೋದ ಮೇಲೆ ಬಿಜೆಪಿ ಬಂದು ಅವರ ಮಗ ಬರಬಾರದು, ಆ ಚಿಂತೆ ನಮಗೆ ಕಾಡುತ್ತಿದೆ. ಬಿಜೆಪಿ ಹೈಕಮಾಂಡ್ ಏನೂ ಮಾಡುತ್ತದೋ ನೋಡೋಣ. ಚಿತ್ರದುರ್ಗದಲ್ಲಿ ಐವತ್ತು ವರ್ಷದ ಕಾರ್ಯಕ್ರಮ ಮಾಡ್ತಾರಂತೆ. ಇದು ಒಂದು ಬ್ಲ್ಯಾಕ್‌ಮೇಲ್ ಮಾಡುವ ತಂತ್ರ. ಲಿಂಗಾಯತರು ಯಾರೂ ಅವರ ಹಿಂದೆ ಇಲ್ಲ. ಸುಮ್ನೆ ಈ ರೀತಿ ಮಾಡ್ತಿದ್ದಾರೆ ಎಂದರು.

ಉತ್ತರ ಕರ್ನಾಟಕಕ್ಕೆ ಎರಡೂ ಪಕ್ಷದಿಂದ ಹಾನಿಯಾಗಿದೆ. ಮುಸ್ಲಿಂ ಸಮುದಾಯದ ಮತ ನಮಗೆ ಬೇಡ ಎಂದು ಹೇಳಿದಿನಿ. ದಾವಣಗೆರೆಯಲ್ಲಿ ಬಿಜೆಪಿಗೆ ಮುಸ್ಲಿಂರು ವೋಟ್ ಹಾಕ್ತಾರೆ ಅಂದ್ರು. ಸಿದ್ದರಾಮಯ್ಯ ಅವರ ಬಳಿ ಹೋಗಿ ಪ್ಯಾಕಿಂಗ್ ಆಗಿ ಬಂದ್ರು. ಐಪಿಎಲ್ ಟಿಕೆಟ್ ಸಲುವಾಗಿ ಎಂಎಲ್‌ಗಳಿಗೆ ಐದು ಪಾಸ್ ಕೊಡಬೇಕಂತೆ ಎರಡು ಲಕ್ಷ ವೇತನ ಕೊಡ್ತಾರೆ ನಮಗೆ. ಐದಾರು ಸಾವಿರ ರೂಪಾಯಿ ಟಿಕೆಟ್ ತಗೊಂಡು ತಿಂಡಿ ಇದ್ರೇ ಹೋಗಬೇಕು ಎಂದು ಹರಿಹಾಯ್ದರು.

# ಕಲ್ಲೋಳಿಯಲ್ಲಿ ಮಹಾವೀರರ ಜಯಂತಿ ಆಚರಣೆ




**ಬೆಳಗಾವಿ ವಾರ್ತೆ ಮೂಡಲಗಿ:** ಭಗವಾನ್ ಮಹಾವೀರರ ಸಂದೇಶಗಳು, ತತ್ವಗಳು ಆಧುನಿಕ ಜೀವನದ ದಾರಿ ಆಗಿದೆ, ಜೈನ ಧರ್ಮದ ತತ್ವಗಳು ಆಧುನಿಕ ಮಾನವನ ಜೀವನದಲ್ಲಿ ಆರೋಗ್ಯ ಮತ್ತು ಆಯುಷ್ಯ ಮೇಲೆ ಒಳ್ಳೆಯ ಪರಿಣಾಮ ಬೀರುತ್ತದೆ ಎಂದು ಕಲ್ಲೋಳಿಯ ಶ್ರೀ ಬಸವೇಶ್ವರ ಶಿಕ್ಷಣ ಸಂಸ್ಥೆ ಯ ಆಡಳಿತ ಅಧಿಕಾರಿ ಪ್ರಕಾಶ ಗರಗಟ್ಟಿ ಹೇಳಿದರು.

ಅವರು ಸೋಮವಾರ ತಾಲ್ಲೂಕಿನ ಕಲ್ಲೋಳಿಯ ಶ್ರೀ ಬಸವೇಶ್ವರ ಶಿಕ್ಷಣ ಸಂಸ್ಥೆಯಲ್ಲಿ ಜರುಗಿದ ಇಪ್ಪತ್ನಾಲ್ಕನೆಯ ತೀರ್ಥಂಕರರಾದ ಭಗವಾನ್ ಮಹಾವೀರರ ಜಯಂತಿ ಕಾರ್ಯಕ್ರದಲ್ಲಿ ಮುಖ್ಯ ಅತಿಥಿ ಗಳಾಗಿ ಮಾತನಾಡಿದರು,

ಸಂಸ್ಥಾಪಕ ಅಧ್ಯಕ್ಷ ಈರಪ್ಪ ಬೆಳಕೂಡ, ಚೇರ್ಮನ್ ರಮೇಶ ಬೆಳಕೂಡ ಕಾರ್ಯದರ್ಶಿ ಡಾ ಭೋಜ ರಾಜ್ ಬೆಳಕೂಡ, ಪ್ರಾಚಾರ್ಯರು, ಮುಖ್ಯ ಶಿಕ್ಷಕರು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು, ಮುಖ್ಯ ಶಿಕ್ಷಕ ಕುಮಾರ್ ಪೋಟಿ ಸ್ವಾಗತಿಸಿ, ವಿದ್ಯಾ ಬಡಿಗೇರ್ ನಿರೂಪಿಸಿದರು , ಗುರು ಖಡಕಭಾವಿ ವಂದಿಸಿದರು.

# ಪ್ರೇಯಸಿಯನ್ನು ತುಂಡು ತುಂಡಾಗಿ ಕತ್ತರಿಸಿ ಫ್ರಿಡ್ಜ್‌ನಲ್ಲಿಟ್ಟ ಪಾಗಲ್ ಪ್ರೇಮಿ.!



ವಿಶಾಖಪಟ್ಟಣ: ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿ ಅಂತಹದ್ದೇ ಭೀಕರ ಘಟನೆಯೊಂದು ನಡೆದಿದೆ. ಭಾರತೀಯ ನೌಕಾಪಡೆಯ ಅಧಿಕಾರಿಯೊಬ್ಬರು ತನ್ನ ಪ್ರೇಯಸಿಯನ್ನು ಬರ್ಬರವಾಗಿ ಹತ್ಯೆ ಮಾಡಿ, ಆಕೆಯ ದೇಹವನ್ನು ತುಂಡು ತುಂಡು ಮಾಡಿ ಫ್ರಿಡ್ಜ್‌ನಲ್ಲಿಟ್ಟಿರುವ ಘಟನೆ ಬೆಳಕಿಗೆ ಬಂದಿದೆ.

ದುರ್ದೈವಿ ಪೋಲಿಪಲ್ಲಿ ಮೌನಿಕಾ (29) ಮೃತ ದುರ್ದೈವಿ. ಐಓಖ ದೇಗಾದಲ್ಲಿ (ಐಓಖ ಆಜರಂಚಿ) ಕಾರ್ಯನಿರ್ವಹಿಸುತ್ತಿರುವ ಚಿಂತಾಡ ರವೀಂದ್ರ (35) ಎಂಬಾತನನ್ನ ಪೊಲೀಸರು ಬಂಧಿಸಿದ್ದಾರೆ.

ಪೊಲೀಸ್ ತನಿಖೆಯ ಪ್ರಕಾರ, ರವೀಂದ್ರ ಮತ್ತು ಮೌನಿಕಾ 2021ರಲ್ಲಿ ಡೇಟಿಂಗ್ ಆ್ಯಪ್ ಮೂಲಕ ಪರಿಚಯವಾಗಿದ್ದರು. ರವೀಂದ್ರ ಅವರಿಗೆ ಮದುವೆಯಾಗಿದ್ದರೂ, ಇವರಿಬ್ಬರ ನಡುವೆ ಪ್ರೇಮ ಸಂಬಂಧ ಬೆಳೆದಿತ್ತು. ವಿಶಾಖಪಟ್ಟಣದ ವಿವಿಧ ಪಾರ್ಕ್‌ಗಳು ಮತ್ತು ಚಿತ್ರಮಂದಿರಗಳಲ್ಲಿ ಇವರು ಆಗಾಗ ಭೇಟಿಯಾಗುತ್ತಿದ್ದರು.

ನಂತರ ಸಾಕ್ಷಿ ನಾಶಪಡಿಸಲು ಸಂಚು ರೂಪಿಸಿದ ರವೀಂದ್ರ, ಮೃತದೇಹವನ್ನು ಅನೇಕ ತುಂಡುಗಳನ್ನಾಗಿ ಕತ್ತರಿಸಿದ್ದಾನೆ. ದೇಹದ ಕೆಲವು ಭಾಗಗಳನ್ನು ಚೀಲದಲ್ಲಿ ತುಂಬಿ ನಿರ್ಜನ ಪ್ರದೇಶದಲ್ಲಿ ಎಸೆದರೆ, ಉಳಿದ ಭಾಗಗಳನ್ನು ಮನೆಯಲ್ಲಿದ್ದ ಫ್ರಿಡ್ಜ್‌ನಲ್ಲಿ ಅಡಗಿಸಿಟ್ಟಿದ್ದ.

ಪೊಲೀಸರು ರವೀಂದ್ರನ ಮನೆಗೆ ಧಾವಿಸಿದಾಗ ಫ್ರಿಡ್ಜ್ ಮತ್ತು ಮನೆಯೊಳಗೆ ಶವದ ಭಾಗಗಳು ಪತ್ತೆಯಾಗಿವೆ. ಆದರೆ ಮೌನಿಕಾಳ ತಲೆ ಇನ್ನೂ ಪತ್ತೆಯಾಗಿಲ್ಲ. ಆರೋಪಿಯು ತಲೆಯನ್ನು ಬೇರೆಡೆ ಎಸೆದಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ನಾಪತ್ತೆಯಾಗಿರುವ ದೇಹದ ಭಾಗಗಳ ಪತ್ತೆಗಾಗಿ ವಿಶೇಷ ಪೊಲೀಸ್ ತಂಡವನ್ನು ರಚಿಸಲಾಗಿದೆ.

# ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅಚಾತುರ್ಯ ಆಗಿಲ್ಲ- ಬಿಇಒ ಪ್ರಕಾಶ ಹಿರೇಮಠ

**ಬೆಳಗಾವಿ ವಾರ್ತೆ ಮೂಡಲಗಿ:** ಮೂಡಲಗಿ ಶೈಕ್ಷಣಿಕ ವಲಯದಲ್ಲಿ ಇರುವ ಎಸ್‌ಎಸ್‌ಎಲ್‌ಸಿಯ ಎಲ್ಲ ಪರೀಕ್ಷಾ ಕೇಂದ್ರಗಳಲ್ಲಿ ಆಯಾ ದಿನದ ಪ್ರಶ್ನೆ ಪತ್ರಿಕೆಗಳನ್ನು ಇಲಾಖೆಯ ನಿಯಮದಂತೆ ಭದ್ರತೆಯಲ್ಲಿ ವಾಹನದಲ್ಲಿ ಮಾರ್ಗಾಧಿಕಾರಿಯು ತಲುಪಿಸಿ ಮರಳಿ ಉತ್ತರ ಪತ್ರಿಕೆಗಳನ್ನು ಅದೇಮಾರ್ಗದಲ್ಲಿ ಭದ್ರತೆ ಮೂಲಕ ವಾಹನ ಮೂಲಕ ಬಿಇಒ ಕಚೇರಿಗೆ ವಾಪಸ್ ಪಡೆಯಲಾಗುತ್ತಿದೆ ಕ್ಷೇತ್ರ ಶಿಕ್ಷಣಾಧಿಕಾರಿ ಪ್ರಕಾಶ ಹಿರೇಮಠ ಹೇಳಿದರು.

ರವಿವಾರದಂದು ಪಟ್ಟಣದ ಬಿ.ಆರ್.ಸಿ ಕಛೇರಿಯ ಸಭಾ ಭವನದಲ್ಲಿ ಮೂಡಲಗಿ ಶೈಕ್ಷಣಿಕ ವಲಯದ ಎಸ್.ಎಸ್.ಎಲ್.ಸಿ 22 ಪರೀಕ್ಷೆ ಕೇಂದ್ರಗಳ ಮುಖ್ಯ ಅಧ್ಯೀಕ್ಷರು ಉಪಮುಖ್ಯ ಅಧ್ಯೀಕ್ಷರು ಹಾಗೂ ಪ್ರಶ್ನೆ ಪತ್ರಿಕೆ ಪಾಲಕರು ಮಾರ್ಗಾಧಿಕಾರಿಗಳ ಸಭೆ ನಡೆಸಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾ. 25ರಂದು ಜರುಗಿದ ಆಂಗ್ಲ ಭಾಷಾ ಪರೀಕ್ಷೆಯ ಉತ್ತರ ಪತ್ರಿಕೆಯನ್ನು ಪಡೆಯಲು ಭದ್ರತಾ ವಾಹನವು ಖಾನಟ್ಟಿ ಪರೀಕ್ಷಾ ಕೇಂದ್ರದಿಂದ ಸ್ಥಳೀಯ ಉಮಾಬಾಯಿ ಶಾಲೆಗೆ ತೆರಲು ಹೋಗುವಾಗ ಇಕ್ಕಟ್ಟಾದ ದಾರಿಯಲ್ಲಿ ಸಂಚಾರ ದಟ್ಟಣೆಯಿಂದಾಗಿ ವಾಹನ ನಿಲ್ಲುವಂತಾಗಿದೆ. ಸಮಯ ನಿರ್ವಹಣೆಗಾಗಿ ಉಮಾಬಾಯಿ ಶಾಲೆಯಿಂದ ಬೈಕ್ ಮೇಲೆ ಪರೀಕ್ಷೆಗೆ ಸಂಬಂಧಿಸಿದ ಜವಾಬ್ದಾರಿ ಸಿಬ್ಬಂದಿಯವರು ಭದ್ರತಾ ವಾಹನದ ಬಳಿಗೆ ಉತ್ತರ ಪತ್ರಿಕೆಗಳ ಸೀಲ್ ಮಾಡಿದ್ದ ಬಂಡಲ್‌ಗಳನ್ನು ಸಾಗಿಸಿದ್ದು ಎಂದು ಸಾಮಾಜಿಕ ಜಾಲ ತಾಣಗಳಲ್ಲಿ ಹರದಾಡಿದೆ. ರಸ್ತೆಯಲ್ಲಿ ವಾಹನ ಜನ ದಟ್ಟಣೆಯಿಂದಾಗಿ ಆಗಿದ್ದ ವಿಳಂಬವನ್ನು ಸರಿದೂಗಿಸಲು 50 ಮೀ. ಅಂತರದಲ್ಲಿದ್ದ ಭದ್ರತಾ ವಾಹನದ ಬಳಿಗೆ ಬಂಡಲ್‌ಗಳನ್ನು ಬೈಕ್ ಮೇಲೆ ಕೇಂದ್ರದ ಸ್ಥಾನಿಕ್ ಜಾಗೃತದಳ ಅಧಿಕಾರಿ ಅವರೊಂದಿಗೆ ಜವಾಬ್ದಾರಿಯಲ್ಲಿ ಸಾಗಿಸಲಾಗಿದೆ ಎಂದು ಶಾಲೆಯವರು ತಿಳಿಸಿದ್ದಾರೆ.




ಮೂಡಲಗಿ: ಬಿಇಒ ಪ್ರಕಾಶ ಹಿರೇಮಠ ಅವರು ಪಟ್ಟಣದ ಬಿ.ಆರ್.ಸಿ ಕಛೇರಿಯ ಸಭಾ ಭವನದಲ್ಲಿ ಮೂಡಲಗಿ ಶೈಕ್ಷಣಿಕ ವಲಯದ ಎಸ್.ಎಸ್.ಎಲ್.ಸಿ 22 ಪರೀಕ್ಷೆ ಕೇಂದ್ರಗಳ ಮುಖ್ಯ ಅಧ್ಯೀಕ್ಷರು ಉಪಮುಖ್ಯ ಅಧ್ಯೀಕ್ಷರು ಹಾಗೂ ಪ್ರಶ್ನೆ ಪತ್ರಿಕೆ ಪಾಲಕರು ಮಾರ್ಗಾಧಿಕಾರಿಗಳ ಸಭೆ ನಡೆಸಿದರು.

ಈ ಸಂಬಂಧವಾಗಿ ಆಗಿರುವ ಘಟನೆಯನ್ನು ತಿಳಿದು ಸಂಬಂಧಿಸಿದ ಪರೀಕ್ಷಾ ಸಿಬ್ಬಂದಿಯವರಿಗೆ ನೋಟಿಸ್ ಸಹ ನೀಡಲಾಗಿದೆ ಮತ್ತು ಅಲ್ಲಿ ಯಾವುದೇ ರೀತಿಯ ಪರೀಕ್ಷೆಯ ಅಚಾತುರ್ಯ ಸಂಭವಿಸಿಲ್ಲ ಎಂದು ಬಿಇಒ ಹಿರೇಮಠ ಅವರು ಪ್ರತಿಕ್ರಿಯಿಸಿದರು.



ಪರೀಕ್ಷೆಯನ್ನು ಮಂಡಳಿ ನಿಯಮವಂತೆ ಕಟ್ಟುನಿಟ್ಟಾಗಿ ಪಾರದರ್ಶಕವಾಗಿ ನಕಲು ರಹಿತವಾಗಿ ನಡೆಸಲು ಎಚ್ಚರಿಕೆ ನೀಡಲಾಗಿದು, ಪರೀಕ್ಷಾ ದಿನದಂದು ಮಾರ್ಗಾಧಿಕಾರಿಗಳಿಂದ ಪ್ರಶ್ನೆ ಪತ್ರಿಕೆಗಳನ್ನು ಪಡೆದು ಗೌಪತಿಯನ್ನು ಕಾಪಾಡಿಕೊಂಡು ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಿ ಉತ್ತರ ಪತ್ರಿಕೆಗಳನ್ನು ಮಾರ್ಗ ಅಧಿಕಾರಿಗಳ ಮೂಲಕ ಎಸ್ಕಾರ್ಟ್ ವ್ಯವಸ್ಥೆಯೊಂದಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯಕ್ಕೆ ತಲುಪಿಸಲು ಕಟ್ಟುನಿಟ್ಟಿನ ಸೂಚನೆಯನ್ನು ನೀಡಲಾಗಿದೆ ಎಂದು ಬಿಇಒ ಅವರು ಸ್ಪಷ್ಟಪಡಿಸಿದರು.

# ದಾವಣಗೆರೆ ಉಪ ಚುನಾವಣೆಗೆ ಸಮರ್ಥ ಶಾಮನೂರ ಉಸ್ತುವಾರಿ ನೇಮಕ

ಹುಬ್ಬಳ್ಳಿ: ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸಮರ್ಥ ಶಾಮನೂರ ಅವರ ಗೆಲುವಿಗಾಗಿ ಶ್ರಮಿಸಲು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸದಾನಂದ ವೀ. ಡಂಗನವರ ಅವರನ್ನು ಕೆಪಿಸಿಸಿ ಅಧ್ಯಕ್ಷರಾದ ಡಿ.ಕೆ. ಶಿವಕುಮಾರ್ ಅವರು ಉಪಚುನಾವಣೆಯ ಉಸ್ತುವಾರಿಗಳಾಗಿ ನೇಮಕ ಮಾಡಿದ್ದಾರೆ.



BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001